ಸಂಪುಟ : 9 ಸಂಚಿಕೆ 22 ಪುಟ : 4 ಬೆಲೆ : 3.00 ಮಂಗಳವಾರ ಫೆಬ್ರವರಿ 20, 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 22 Pages : 4 Price : 3.00 Tuesday February 20, 2024 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಬೆಟಗೇರಿ ಅವಳಿ ನಗರದಲ್ಲಿ ಫೆಬ್ರವರಿ 20ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

ಸ್ಥಳಗಳ ವಿವರ : ವಾರ್ಡ್ ನಂ. 21 ವಿಜಯನಗರ ಶಾಲೆ, ಟವರ್ ಕಂಬ, ಶಿಗ್ಗಾವಿ ಲೇಔಟ್, ಕಮತರ ಪ್ಲಾಟ್, ವಾಲ್ಮೀಕಿ ಭವನ. ವಾರ್ಡ್ ನಂ. 21, 16 ಅಬ್ಬಿಗೇರಿ ಕಾಲೋನಿ ಭಾಗ -1,2, ಕುಷ್ಟರೋಗ ಕಾಲೋನಿ ಭಾಗ -1,2, ಕುಂಬಾರ ಓಣಿ, ಅಂಬೇಡ್ಕರ್ ಓಣಿ, ಗಂಗಿಮಡಿ ಹೊಸ ಲೈನ್.

ವಾರ್ಡ್ ನಂ. 29, 28 ಪಂಚಾಕ್ಷರಿ ನಗರ, ರಾಜೀವ ಗಾಂಧಿ ನಗರ, ಪಂಚಾಕ್ಷರಿ ನಗರ 3ನೇ ಕ್ರಾಸ್, ರಾಜೀವ ಗಾಂಧಿ ನಗರ 2, 3, 4, 5 ನೇ ಕ್ರಾಸ್. ವಾರ್ಡ್ ನಂ. 5ನೇಕಾರ ಕಾಲೋನಿ, ಇಂಡಸ್ಟ್ರಿಯಲ್ ಕೆಲವು ಭಾಗಗಳು. ವಾರ್ಡ್ ನಂ. 24, 26 ಮಖಾನಗಲ್ಲಿ, ಉಡಚಮ್ಮನ ಗುಡಿ, ಬನ್ನಿ ಮಹಾಕಾಳಿ ಗುಡಿ ರಸ್ತೆ, ಅಬ್ಬಿಗೇರಿ ಕಾಂಪೌಂಡ್, ತೆಗ್ಗಿನ ಲಾಟ್, ಕಮ್ಮಾರ ಸಾಲ, ಸಾಲ ಮನೆ, ಉರ್ದು ಶಾಲೆಯ ಹಿಂದಿನ ಭಾಗದ ಕೆಲವು ಉಳಿದ ಭಾಗಗಳು.

ಈಗಾಗಲೇ ಕುಡಿಯುವ ನೀರಿನ ನಳ ಹೊಂದಿರುವ ಬಾಕಿದಾರರ ಪಟ್ಟಿ ತಯಾರಿಸಿದ್ದು, ನಾಗರಿಕರು ಕೂಡಲೇ ತಮ್ಮ ಕುಡಿಯುವ ನೀರಿನ ಬಾಕಿ ಕರವನ್ನು ಸಂದಾಯ ಮಾಡುವಂತೆ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶ್ರೀ ವೀರಪ್ಪಜ್ಜನವರ ರಥೋತ್ಸವ ಸಂಪನ್ನ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಇಲ್ಲಿನ ಕೋಡಿಕೊಪ್ಪದ ಹಠಯೋಗಿ ಶ್ರೀ ವೀರಪ್ಪಜ್ಜನವರ ರಥೋತ್ಸವವು ಸೋಮವಾರ ಸಂಜೆ ಸಹಸ್ರಾರು ಭಕ್ತರ ಜಯಘೋಷಗಳ ಮಧ್ಯೆ ಸಡಗರ-ಸಂಭ್ರಮಗಳಿಂದ ನಡೆಯಿತು.

ಹರಹರ ಮಹಾದೇವ, ಶ್ರೀ ವೀರಪ್ಪಜ್ಜ ಮಹಾರಾಜಕೀ ಜೈ, ಹುಚ್ಚೀರಪ್ಪಜ್ಜನಿಗೆ ಜಯವಾಗಲಿ ಎಂಬ ಜಯ ಘೋಷಗಳು ಭಕ್ತರ ಸಮೂಹದಿಂದ ಮುಗಿಲು ಮುಟ್ಟುತ್ತಲೇ ದೇವಸ್ಥಾನದ ಎದಿರು ನಿಂತಿದ್ದ ರಥವು ಸಾವಧಾನವಾಗಿ ಪಾದಗಟ್ಟೆಯ ಕಡೆಗೆ ಚಲಿಸಿತು. ಭಕ್ತರು ಹೂವು, ಬಾಳೆ ಹಣ್ಣು, ಉತ್ತತ್ತಿಗಳನ್ನು ತೇರಿಗೆ ಭಕ್ತಿಯಿಂದ ಸಮರ್ಪಿಸಿದರು.

'ಯಾವುದು ಹೌದು ಅದು ಅಲ್ಲ-ಯಾವುದು ಅಲ್ಲ ಅದು ಹೌದು' ಎಂಬ ವೇದದ ಸಾರವನ್ನು ಎರಡೇ ಎರಡು ಸಾಲುಗಳಲ್ಲಿ ಜಗತ್ತಿಗೆ ನೀಡಿದ ಮಹಾ ದಾರ್ಶನಿಕ ವೀರಪ್ಪಜ್ಜ. ಆತ ಹಠಯೋಗಿಯೂ ಹೌದು. ಹಠಯೋಗದಿಂದಲೇ ಎಲ್ಲವನ್ನೂ ಸಾಧಿಸಿ ಮುಕ್ತಿಯನ್ನು ಕಂಡ ಪವಾಡ ಪುರುಷ. ಪ್ರತಿ ಅಮವಾಸ್ಯೆಗೂ ಇಲ್ಲಿ ಒಂದು ಸಣ್ಣ ಜಾತ್ರೆಯೇ ನೆರೆದಿರುತ್ತದೆ.

ಗದುಗಿನ ನೆರೆಯ ಜಿಲ್ಲೆಗಳಾದ ಧಾರವಾಡ, ಕೊಪ್ಪಳ, ಬಾಗಲಕೋಟೆ ಜಿಲ್ಲೆಗಳಿಂದಲೂ ಭಕ್ತಸಾಗರ ಹರಿದು ಬಂದಿತ್ತು. ಚಿಣ್ಣರು ಬಣ್ಣ ಬಣ್ಣದ ಬಟ್ಟೆಗಳನ್ನು ತೊಟ್ಟು ನಲಿದರೆ, ಲಲನೆಯರು ಸುಂದರವಾದ ಸೀರೆಗಳನ್ನು ಉಟ್ಟು ಸಂಭ್ರಮಿಸಿದರು. ಹಿರಿಯರು ಈ ಹಿಂದಿನ ಜಾತ್ರೆಯ ವೈಭವವನ್ನು ನೆನೆಯುತ್ತ ನಡೆದರೆ, ಹೊಸದಾಗಿ ಬಂದವರು ಕುತೂಹಲದಿಂದ ಜಾತ್ರೆಯ ವೈಭವವನ್ನು ಕಣ್ಣು ತುಂಬಿಕೊಂಡರು.

ಪಾದಗಟ್ಟೆಯವರೆಗೆ ಸಾಗಿದ ಜಾತ್ರೆ ಮರಳಿ ಸ್ವಸ್ಥಾನಕ್ಕೆ ಬಂದು ಸೇರಿದಾಗ ಭಕ್ತರು ಸಂತೋಷದಿಂದ ಚಪ್ಪಾಳೆ ತಟ್ಟಿ ತಮ್ಮ ಹರ್ಷವನ್ನು ವ್ಯಕ್ತಪಡಿಸಿದರು. ಜಾತ್ರಾ ಮಹೋತ್ಸವದ ನಿಮಿತ್ತ ಶ್ರೀಮಠದಲ್ಲಿ ರವಿವಾರ ಸಾಮೂಹಿಕ ವಿವಾಹ ಜರುಗಿತು. ಹಿರೇಮಠದ ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು ದಿವ್ಯ ಸಾನ್ನಿಧ್ಯ ವಹಿಸಿ, ನೂತನ ದಂಪತಿಗಳನ್ನು ಆಶೀರ್ವದಿಸಿದರು.

### ಹೊಸ ತಿರುವು ಪಡೆದುಕೊಳ್ಳುತ್ತಿರುವ 'ಭಾವೈಕ್ಯತಾ ದಿನ' ಆಚರಣೆಯ ವಿಚಾರ । ಪರ-ವಿರೋಧ ಚರ್ಚೆ

# ಭಾವೈಕ್ಯತೆಯೆಂಬುದು ಯಾರೇ ಒಬ್ಬ ವ್ಯಕ್ತಿಗೆ ಸೀಮಿತವಲ್ಲ



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ತೋಂಟದಾರ್ಯ ಮಠ ಮತ್ತು ಶಿರಹಟ್ಟಿಯ ಫಕೀರೇಶ್ವರ ಮಠಗಳೆರಡೂ ಗದಗ ಜಿಲ್ಲೆಯ ಎರಡು ಪ್ರಮುಖ ಮಠಗಳು. ಎರಡೂ ಪೀಠ ತಮ್ಮದೇ ಆದ ಅಸಂಖ್ಯಾತ ಭಕ್ತ ಸಮೂಹವನ್ನು ಹೊಂದಿವೆ. ಇದೀಗ, ತೋಂಟದ ಸಿದ್ದಲಿಂಗ ಶ್ರೀಗಳ 75ನೇ ಜಯಂತಿಯನ್ನು 'ಭಾವೈಕ್ಯತಾ ದಿನ'ವನ್ನಾಗಿ ಆಚರಿಸುತ್ತಿರುವುದಕ್ಕೆ ಫಕೀರೇಶ್ವರ ಮಠದ ಉತ್ತರಾಧಿಕಾರಿ ಫಕೀರ ದಿಂಗಾಲೇಶ್ವರ ಶ್ರೀಗಳು ಆಕ್ಷೇಪ ವ್ಯಕ್ತಪಡಿಸಿರುವುದು ಎರಡೂ ಮಠಗಳ ಭಕ್ತರ ನಡುವಿನ ಅಸಮಾಧಾನಕ್ಕೆ ಕಾರಣವಾಗಿದೆ.

ಬರುವ ಫೆ.21ರಂದು ಸಿದ್ದಲಿಂಗ ಸ್ವಾಮೀಜಿಗಳ 75ನೇ ಜಯಂತಿಯನ್ನು 'ಭಾವೈಕ್ಯತಾ ದಿನ' ಎಂಬ ಹೆಸರಿನೊಂದಿಗೆ ಆಚರಿಸಲು ಸಿದ್ಧತೆಗಳು ನಡೆಯುತ್ತಿವೆ. ಈ ದಿನವನ್ನು 'ಭಾವೈಕ್ಯತಾ ದಿನ' ಎಂಬ ಹೆಸರಿನೊಂದಿಗೆ ಆಚರಿಸಿದರೆ ಶಿರಹಟ್ಟಿ ಮಠದ ಭಕ್ತರಿಂದ ಈ ದಿನವನ್ನು 'ಕರಾಳ ದಿನ' ಎಂದು ಆಚರಿಸುತ್ತೇವೆ ಎಂದು ಜ.ಫಕೀರ ದಿಂಗಾಲೇಶ್ವರ ಶ್ರೀಗಳು ತಿಳಿಸಿದ್ದರು. ಭಾವೈಕ್ಯತೆಯ ಪರಂಪರೆ ಶಿರಹಟ್ಟಿಯ ಫಕೀರೇಶ್ವರ ಮಠದ್ದಾಗಿದೆ. ಲಿಂಗೈಕ್ಯ ಡಾ. ಸಿದ್ದಲಿಂಗ ಸ್ವಾಮೀಜಿಯವರಿಗೆ 'ಭಾವೈಕ್ಯತೆಯ ಹರಿಕಾರ' ಎಂಬುದು ಅನ್ವಯವಾಗುವದಿಲ್ಲ. ಹೀಗಾಗಿ, ಭಾವೈಕ್ಯತಾ ಹರಿಕಾರ ಎನ್ನುವ ಪದವನ್ನು ಬಳಕೆ ಮಾಡಬಾರದು.

> ವೀರಶೈವ ಲಿಂಗಾಯತ ಧರ್ಮವನ್ನು ಸಿದ್ಧಲಿಂಗ ಶ್ರೀಗಳು ಒಡೆದಿದ್ದಾರೆ ಎಂಬ ದಿಂಗಾಲೇಶ್ವರ ಶ್ರೀಗಳ ಹೇಳಿಕೆಯ ಕುರಿತು ಪ್ರತಿಕ್ರಿಯಿಸಿದ ಸಿದ್ದರಾಮ ಶ್ರೀಗಳು, ವೀರಶೈವ ಎಂಬುದು ಲಿಂಗಾಯತದ ಒಂದು ಭಾಗ. 12ನೇ ಶತಮಾನದಿಂದಲೂ ಲಿಂಗಾಯತ ಧರ್ಮವಿದೆ. ಅದನ್ನು ಒಡೆಯುವ ಪ್ರಮೇಯವೇ ಇಲ್ಲ. ಪ್ರತ್ಯೇಕ ಧರ್ಮ ಹೋರಾಟ ತಟಸ್ಥವಾದುದರ ಹಿಂದೆ ರಾಜಕಾರಣಿಗಳ ಹೊರಳಾಟವಿದೆ. ರಾಜಕಾರಣಿಗಳಿಗೆ ಮತ ಮುಖ್ಯವೇ ಹೊರತು ಸಿದ್ಧಾಂತವಲ್ಲ ಎಂಬುದು ಎಲ್ಲರಿಗೂ ತಿಳಿದ ವಿಚಾರ.
> **- ತೋಂಟದ ಸಿದ್ದರಾಮ ಶ್ರೀಗಳು.**



ನಮ್ಮ ಮನವಿಗೆ ಸ್ಪಂದಿಸದಿದ್ದರೆ ತೋಂಟದಾರ್ಯ ಮಠದ ಬೀದಿಯಲ್ಲಿ ಬೃಹತ್ ಹೋರಾಟ ನಡೆಸುತ್ತೇವೆ ಎಂದು ಸಿಎಂ ಸಿದ್ದರಾಮಯ್ಯ, ಗೃಹ ಸಚಿವರು, ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಿದ್ದೇವೆ ಎಂದೂ ದಿಂಗಾಲೇಶ್ವರ ಶ್ರೀಗಳು ತಿಳಿಸಿದ್ದರು.

ಈ ಕುರಿತು ಸೋಮವಾರ ಸಂಜೆ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ತೋಂಟದ ಸಿದ್ದರಾಮ ಶ್ರೀಗಳು, ಭಾವೈಕ್ಯತೆಯೆಂಬುದು ಯಾರೇ ಒಬ್ಬ ವ್ಯಕ್ತಿಗೆ ಸೀಮಿತವಲ್ಲ. ದಿಂಗಾಲೇಶ್ವರ ಶ್ರೀಗಳು ಕರಾಳ ದಿನ ಆಚರಣೆ ಮಾಡಿದ್ದಾದರೆ, ಅದನ್ನು ಜಿಲ್ಲಾಡಳಿತ ನೋಡಿಕೊಳ್ಳುತ್ತದೆ. ಕರಾಳ ದಿನ ಆಚರಣೆ ತಪ್ಪಾದರೆ ಸರ್ಕಾರ ಇದನ್ನು ನಿಷೇಧಿಸಲಿ ಅಥವಾ ನಮಗೆ ನಿರ್ದೇಶನ ನೀಡಲಿ. ಈ ವಿಷಯದ ಬಗ್ಗೆ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಿದ್ದೇವೆ ಎಂದರು.

ತೋಂಟದಾರ್ಯ ಮಠದಲ್ಲಿ ಸಾಕಷ್ಟು ಸಾಮರಸ್ಯ ಬೆಸೆಯುವ ಕೆಲಸ ಮಾಡಿದ್ದೇವೆ. ಜಾತ್ರಾ ಕಮಿಟಿಗೆ ಮುಸ್ಲಿಂರನ್ನು ಆಯ್ಕೆ ಮಾಡಿದ ಉದಾಹರಣೆಗಳಿವೆ. ಮಸೀದಿಗಳಿಗೆ ಮಠದ ಜಾಗ ಬಿಟ್ಟುಕೊಟ್ಟಿದ್ದೇವೆ. ಮಠದಲ್ಲಿ ಅಲ್ಲಾಹುವನ್ನು, ಮಸೀದಿಯಲ್ಲಿ ಸಿದ್ಧಲಿಂಗನನ್ನು ಕಾಣಬೇಕೆಂದು ಶ್ರೀಗಳು ಹೇಳುತ್ತಿದ್ದರು. ಮಠಕ್ಕೆ ಅನೇಕ ಮುಸ್ಲಿಂ ಭಕ್ತರು ನಡೆದುಕೊಳ್ಳುತ್ತಿದ್ದಾರೆ. ಲಿಂ. ಸಿದ್ಧಲಿಂಗ ಶ್ರೀಗಳು ಎಲ್ಲ ಸಮುದಾಯಗಳೊಂದಿಗೂ ಭಾವೈಕ್ಯತೆಯಿಂದಿದ್ದರು. ಸಿದ್ಧಲಿಂಗ ಶ್ರೀಗಳ ಮೇಲೆ ವೃಥಾ ಆರೋಪ ಹೊರಿಸುವುದು ಸರಿಯಲ್ಲ. ನಮ್ಮ ಕಾಯಕ ನಮ್ಮ ಜೊತೆಗಿರಲಿ ಎಂದರು.

ಈ ನಡುವೆ ಉಭಯ ಶ್ರೀಗಳು ತಮ್ಮ ಮಠದ ಭಕ್ತರೊಂದಿಗೆ ಸಭೆಯನ್ನೂ ನಡೆಸಿದ್ದು, ಭಕ್ತರ ವತಿಯಿಂದಲೂ ಜಿಲ್ಲಾಡಳಿತ, ಸರ್ಕಾರಕ್ಕೆ ಪರ-ವಿರೋಧವಾಗಿ ಮನವಿಗಳು ಸಲ್ಲಿಕೆಯಾಗುತ್ತಿವೆ.

### ಜಿಲ್ಲಾಡಳಿತದಿಂದ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ

# ಶಿವಾಜಿ ದಕ್ಷ ಆಡಳಿತಗಾರರಿಗೆ ಪ್ರೇರಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ಪರಕೀಯರ ಆಡಳಿತ ಕಿತ್ತೊಗೆದು, ಸ್ವರಾಜ ಸ್ಥಾಪಿಸಿದ ಛತ್ರಪತಿ ಶಿವಾಜಿ ಮಹಾರಾಜರು ರಾಷ್ಟ್ರಪ್ರೇಮಿ, ನ್ಯಾಯವಂತ, ಜವಾಬ್ದಾರಿಯುತ, ದಕ್ಷ ಆಡಳಿತಗಾರರಾಗಿದ್ದರು ಎಂದು ಹುಲಕೋಟಿ ಸಹಕಾರ ರೇಡಿಯೋ ನಿಲಯ ನಿರ್ದೇಶಕ ಜೆ.ಕೆ. ಜಮಾದಾರ ತಿಳಿಸಿದರು.

ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಸೋಮವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರುಗಳ ಸಹಯೋಗದಲ್ಲಿ ಏರ್ಪಡಿಸಲಾಗಿದ್ದ ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿ ಅವರು ಮಾತನಾಡಿದರು.

ಶಿವಾಜಿಯವರು ಕ್ರಿ.ಶ. 1630ರಲ್ಲಿ ಜನಿಸಿದರು. ತಂದೆ ಷಹಾಜಿರಾಜೆ ಭೋಸ್ಲೆ. ತಾಯಿ ಜೀಜಾಬಾಯಿ, ಶಿವಾಜಿಯ ತಾಯಿ ವೀರಮಾತೆ ಜೀಜಾಬಾಯಿಯು ಶಿವಾಜಿಗೆ ರಾಮಾಯಣ, ಮಹಾಭಾರತ ಮಹಾಕಾವ್ಯಗಳನ್ನು ಹೇಳುತ್ತ ಜೀವನ ಮೌಲ್ಯಗಳ ಶಿಕ್ಷಣವನ್ನಿತ್ತಳು. ಇವರ ಗುರು ದಾದಾಜಿ ಕೊಂಡದೇವ ಶಸ್ತ್ರಾಸ್ತ್ರ ವಿದ್ಯೆ ಕಲಿಸಿ, ತರುಣ ವೀರನ ಮನಸ್ಸನ್ನು ಜಾಗೃತಗೊಳಿಸಿದರು. ಹಿಂದವೀ ಸ್ವರಾಜ್ಯ ಕಟ್ಟಬೇಕೆಂಬ ಆಕಾಂಕ್ಷೆಯಿಂದ ಮರಾಠಾ ಮುಖಂಡರನ್ನು ಮತ್ತು ಪಶ್ಚಿಮ ಘಟ್ಟಗಳ ಮಾವಳರೆಂಬ ದೃಢಕಾಯದ ಗಿರಿಜನರನ್ನು ಸೇರಿಸಿ ತರುಣರ ಪಡೆಯನ್ನು ಕಟ್ಟಿದರು.



ಶಿವಾಜಿಯು ಸಂತ ರಾಮದಾಸರ ಪರಮ ಭಕ್ತನಾಗಿದ್ದರು. ಹಿಂದೂ ಧರ್ಮಕ್ಕೆ ಛತ್ರಪತಿ ಶಿವಾಜಿಯ ಕೊಡುಗೆ ಅಪಾರ. ಸ್ವಾಭಿಮಾನಿ ರಾಷ್ಟ್ರನಿರ್ಮಾಣಕ್ಕೆ ಹೋರಾಡಿದ ಛತ್ರಪತಿ ಶಿವಾಜಿ ಮಹಾರಾಜರು ರಾಷ್ಟ್ರಭಕ್ತ, ದಕ್ಷ ಆಡಳಿತಗಾರರಿಗೆ ಎಂದೆಂದಿಗೂ ಪ್ರೇರಣೆ ಎಂದರು.

ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ನಂತರ ಅವರ ಭಾವಚಿತ್ರಕ್ಕೆ ಪುಷ್ಪ ಸಮರ್ಪಿಸಿ ಗೌರವ ನಮನ ಸಲ್ಲಿಸಿದರು. ವಕೀಲರಾದ ಸುಧೀರ ಘೋರ್ಪಡೆ ಪ್ರಾಸ್ತಾವಿಕವಾಗಿ ಮಾತನಾಡಿ, ಶಿವಾಜಿ ಮಹಾರಾಜರು ದೇಶಪ್ರೇಮವನ್ನು ಬಡಿದೆಬ್ಬಿಸಿದ ಸ್ವರಾಜ್ಯ, ಸುರಾಜ್ಯ ಸ್ಥಾಪಿಸಿದ ಮೇಧಾವಿ. ಪರಕೀಯರ ಆಳ್ವಿಕೆಯಿಂದ ಸ್ವರಾಜ್ಯ ಸ್ಥಾಪಿಸಿದ ಶೂರ ಎಂದು ವಿವರಿಸಿದರು.

ಮರಾಠಾ ವಿದ್ಯಾವರ್ಧಕ ಸಂಘದ ಅಧ್ಯಕ್ಷ ವಿನೀತಕುಮಾರ ಜಗತಾಪ ಮಾತನಾಡಿ, ಶಿವಾಜಿ ಮಹಾರಾಜರು ದೇಶಭಕ್ತರಾಗಿ, ರಾಷ್ಟ್ರ ಪ್ರೇಮಿಯಾಗಿ, ದಕ್ಷ ಆಡಳಿತಗಾರರಾಗಿ ಬೆಳೆಯುವಲ್ಲಿ ಅವರ ತಾಯಿಯಾದ ಜೀಜಾಬಾಯಿಯವರ ಪಾತ್ರ ಮಹತ್ವದ್ದು. ಜೀಜಾಬಾಯಿಯಂತೆ ಪ್ರತಿಯೊಬ್ಬ ತಾಯಿಯೂ ತನ್ನ ಮಕ್ಕಳನ್ನು ದೇಶಭಕ್ತರನ್ನಾಗಿ ಬೆಳೆಸಬೇಕು ಎಂದರು.

> ಶಿವಾಜಿ ಮಹಾರಾಜರು ಚಾಣಾಕ್ಷತೆಯಿಂದ ಅಫಜಲಖಾನ್ ಹಾಗೂ ಶಯಿಸ್ತಾಖಾನ್‌ನೊಂದಿಗೆ ಹೋರಾಡಿದ ಬಗೆ ಹಾಗೂ ಮೊಘಲರ ವಶದಲ್ಲಿರುವ ಸಿಂಹಗಡ, ತೋರಣಗಡ ಹೀಗೆ ಹಲವಾರು ಕೋಟೆಗಳನ್ನು ವಶಪಡಿಸಿಕೊಂಡು ಸ್ವರಾಜ್ಯ ಸ್ಥಾಪಿಸಿದ ಕುರಿತು ಜೆ.ಕೆ. ಜಮಾದಾರ ವಿವರಿಸಿದರು.

ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಜಿಲ್ಲಾ ಕ್ಷತ್ರಿಯ ಮಹಾಸಭಾ ಅಧ್ಯಕ್ಷ ಶ್ರೀಕಾಂತ ಖಟವಟೆ, ರಾಜಮಾತಾ ಜೀಜಾಬಾಯಿ ಮಹಿಳಾ ಮಂಡಳದ ಅಧ್ಯಕ್ಷೆ ಶೃತಿ ಗ್ವಾರಿ, ಸಮಾಜದ ಗಣ್ಯರಾದ ಮೋಹನ್ ರಾವ್ ಗ್ವಾರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯ ಸ್ವಾಮಿ ಬಿ ಸೇರಿದಂತೆ ಸಮುದಾಯದ ಮುಖಂಡರು, ಹಿರಿಯರು ಹಾಜರಿದ್ದರು.

ನಾಡಗೀತೆಯೊಂದಿಗೆ ಪ್ರಾರಂಭವಾದ ಕಾರ್ಯಕ್ರಮವನ್ನು ಮಂಜರಿ ಹೊಂಬಾಳಿ ನಿರೂಪಿಸಿ, ವಂದಿಸಿದರು.

### ಶಿವಶರಣೆ ಹೇಮರಡ್ಡಿ ಮಲ್ಲಮ್ಮ ದೇವಸ್ಥಾನ ಉದ್ಘಾಟನೆ ಕಾರ್ಯಕ್ರಮದಲ್ಲಿ ಸಚಿವ ಎಚ್.ಕೆ. ಪಾಟೀಲ


# ಹೇಮರಡ್ಡಿ ಮಲ್ಲಮ್ಮ ಸ್ತ್ರೀಕುಲಕ್ಕೆ ಮಾದರಿ

■ ವಿಜಯಸಾಕ್ಷಿ ಸುದ್ದಿ,ಶಿರಹಟ್ಟಿ

ಸಮಾಜದ ಒಳಿತಿಗಾಗಿ ಉತ್ತಮ ಸಂದೇಶಗಳನ್ನು ನೀಡಿದ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಸಮಸ್ತ ಸ್ತ್ರೀಕುಲಕ್ಕೆ ಎಂದೆಂದಿಗೂ ಮಾದರಿಯಾಗಿದ್ದಾರೆ. ಅವರ ತತ್ವ-ಸಿದ್ದಾಂತ ಹಾಗೂ ಆದರ್ಶಗಳನ್ನು ಎಲ್ಲರೂ ಅಳವಡಿಸಿಕೊಳ್ಳಬೇಕು ಎಂದು ಕಾನೂನು, ಸಂಸದೀಯ ವ್ಯವಹಾರ, ಶಾಸನ ರಚನೆ, ಪ್ರವಾಸೋದ್ಯಮ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಅವರು ಭಾನುವಾರ ಶಿರಹಟ್ಟಿ ತಾಲೂಕಿನ ಖಾನಾಪೂರ ಗ್ರಾಮದಲ್ಲಿ ಶ್ರೀ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ನೂತನ ದೇವಸ್ಥಾನ ಉದ್ಘಾಟನೆ, ಮೂರ್ತಿ ಪ್ರತಿಷ್ಠಾಪನೆ ಅಂಗವಾಗಿ ಏರ್ಪಡಿಸಿದ್ದ ಜೀವನ ದರ್ಶನ ಪ್ರವಚನ ಕಾರ್ಯಕ್ರಮದ ಕೊನೆಯ ದಿನದ ಕಳಸಾರೋಹಣ ಕಾರ್ಯಕ್ರಮದಲ್ಲಿ ಹೇಮರಡ್ಡಿ ಮಲ್ಲಮ್ಮ ದೇವಸ್ಥಾನಕ್ಕೆ ತೆರಳಿ ದರ್ಶನ ಪಡೆದು ಮಾತನಾಡಿದರು.

ಹೇಮರಡ್ಡಿ ಮಲ್ಲಮ್ಮನ ಆಶೀರ್ವಾದ ಇರುವ ರೆಡ್ಡಿ ಸಮಾಜವು ನಂಬಿಕೆಗೆ ಅರ್ಹವಾಗಿದ್ದು, ಪ್ರತಿಯೊಂದು ಸಮುದಾಯದೊಂದಿಗೆ ಉತ್ತಮ ಬಾಂಧವ್ಯ ಹೊಂದಿದ್ದಾರೆ. ಸದಾಕಾಲ ಕಾಯಕದಲ್ಲಿ ಶ್ರದ್ದೆಯಿಟ್ಟು ಇಡೀ ಮನುಕುಲಕ್ಕೆ ಆದರ್ಶಳಾಗಿ ಬದುಕಿದ ಶಿವಶರಣೆ ಹೇಮರಡ್ಡಿ ಮಲ್ಲಮ್ಮಳ ಬದುಕು ಸರ್ವರಿಗೂ ಸ್ಪೂರ್ತಿ ಎಂದ ಅವರು, ಸಾಕ್ಷಾತ್ ಮಲ್ಲಿಕಾರ್ಜುನನ್ನು ಒಲಿಸಿಕೊಂಡಿರುವ ಹೇಮರಡ್ಡಿ ಮಲ್ಲಮ್ಮ ಮಹಾಸಾಧ್ವಿಯಾಗಿದ್ದಾರೆ. ಸಮಾಜದ ಒಳಿತಿಗಾಗಿ ಶ್ರಮಿಸಿದ ಇವರ ಜೀವನವು ಅವಿಸ್ಮರಣೀಯವಾಗಿದೆ. ಪ್ರತಿಯೊಬ್ಬ ಮಹಿಳೆಗೂ ಆದರ್ಶಪ್ರಾಯವಾದ ವ್ಯಕ್ತಿತ್ವ ಹೊಂದಿದ ಹೇಮರಡ್ಡಿ ಮಲ್ಲಮ್ಮಳ ಚರಿತ್ರೆಯನ್ನು ಪ್ರತಿಯೊಬ್ಬ ಮಹಿಳೆಯೂ ಅರಿತುಕೊಳ್ಳಬೇಕು ಎಂದರು.




> ಮಲ್ಲಮ್ಮ ಪ್ರತಿಪಾದಿಸಿದ ಭಕ್ತಿ ಮಾರ್ಗದಲ್ಲಿ ಎಲ್ಲರೂ ನಡೆಯಬೇಕು. ಏನೇ ಕಷ್ಟ ಬಂದರೂ ಅದಕ್ಕೆ ಹೆದರದೇ ಪರರಿಗೆ ಒಳಿತು ಮಾಡುವ ಗುಣ ಅವರಲ್ಲಿತ್ತು. ಅಂತಹ ಸದ್ಗುಣಗಳನ್ನು ನಾವೆಲ್ಲರೂ ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಜೀವನದಲ್ಲಿ ಏನೇ ಕಷ್ಟನಷ್ಟ ಅನುಭವಿಸಿದರೂ ಹೇಮರಡ್ಡಿ ಮಲ್ಲಮ್ಮ ಮಾತ್ರ ಇತರರಿಗೆ ಒಳಿತನ್ನು ಬಯಸುವ ವಿಶಾಲ ಮನೋಭಾವ ಹೊಂದಿದ್ದರು. ಅವರು ಕಾಯಕ ಮತ್ತು ದಾಸೋಹಕ್ಕೆ ವಿಶೇಷ ಒತ್ತು ನೀಡಿದ್ದರು ಎಂದು ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಮಾಜಿ ಶಾಸಕ ಜಿ.ಎಸ್. ಗಡ್ಡದ್ದೇವರಮಠ, ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ, ಮಹೇಂದ್ರ ಮುಂಡವಾಡ, ಸುಜಾತ ದೊಡ್ಡಮನಿ, ಎಂ.ಡಿ. ಬಟ್ಟೂರ, ಹೊನ್ನಪ್ಪ ಶಿರಹಟ್ಟಿ, ಎನ್. ಎನ್. ಗೋಕಾವಿ, ಲಕ್ಷ್ಮಣಗೌಡ ಪಾಟೀಲ, ಜಗದೀಶ ಬಟ್ಟೂರ, ಅಜ್ಜು ಪಾಟೀಲ, ಸಿದ್ದು ಪಾಟೀಲ, ಸುರೇಶ ಅಕ್ಕಿ ಹಾಗೂ ಗ್ರಾಮದ ಸಮಸ್ತ ಹಿರಿಯರು ಇದ್ದರು.

### ರಂಭಾಪುರಿ ಶ್ರೀಗಳ ಮೇಲೆ ಚಪ್ಪಲಿ ಎಸೆತ । ಮುಕ್ತಿಮಂದಿರದ ಶ್ರೀಗಳ ಖಂಡನೆ

# ಸರ್ಕಾರ ಘಟನೆಯನ್ನು ಗಂಭೀರವಾಗಿ ಪರಿಗಣಿಸಲಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಬಾಳೆಹೊನ್ನೂರಿನ ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಬಾಗಲಕೋಟೆ ಜಿಲ್ಲೆ ಕಲಾದಗಿ ಮಾರ್ಗವಾಗಿ ಉದಲಗಟ್ಟಿ ಗ್ರಾಮಕ್ಕೆ ಅಡ್ಡಪಲ್ಲಕ್ಕಿ ಕಾರ್ಯಕ್ರಮಕ್ಕೆ ತೆರಳುತ್ತಿದ್ದ ವೇಳೆ ಜಗದ್ಗುರುಗಳ ಮೇಲೆ ನಡೆದ ಚಪ್ಪಲಿ ಎಸೆತದ ಘಟನೆ ನಾಡಿನ ಭಕ್ತ ಕುಲಕೋಟಿ ಮತ್ತು ಹರಗುರು-ಚರಮೂರ್ತಿಗಳ ಪರವಾಗಿ ಖಂಡಿಸುತ್ತೇವೆ ಎಂದು ಅಖಿಲ ಭಾರತ ಶಿವಾಚಾರ್ಯ ಸಂಸ್ಥೆಯ ಅಧ್ಯಕ್ಷರು, ಮುಕ್ತಿಮಂದಿರ ಧರ್ಮಕ್ಷೇತ್ರದ ಪಟ್ಟಾಧ್ಯಕ್ಷರಾದ ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯರು ಹೇಳಿದರು.



ಅವರು ಈ ಕುರಿತು ಸೋಮವಾರ ಲಕ್ಷ್ಮೇಶ್ವರದಲ್ಲಿ ಮಾತನಾಡಿ, 'ಮಾನವ ಧರ್ಮಕ್ಕೆ ಜಯವಾಗಲಿ-ಧರ್ಮದಿಂದಲೇ ವಿಶ್ವಕ್ಕೆ ಶಾಂತಿ' ಎಂಬ ವಿಶ್ವಮಾನವ ಸಂದೇಶದೊಂದಿಗೆ ಧರ್ಮಪ್ರವರ್ತಕರಾಗಿ ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳ ನಾಡಿನಾದ್ಯಂತ ಹಗಲೂ-ರಾತ್ರಿ ಸಂಚರಿಸುತ್ತಾರೆ. ಎಲ್ಲ ಜಾತಿ, ಜನಾಂಗದವರಿಂದ ಜಾತ್ಯಾತೀತವಾಗಿ ಗೌರವಿಸಲ್ಪಡುವ ರಂಭಾಪುರಿ ಜಗದ್ಗುರುಗಳ ವಿರುದ್ಧ ನಡೆಸಿದ ಅನಾಗರಿಕ ಘಟನೆ ನಾಡಿನ ಶ್ರೀಗಳ ಮತ್ತು ಭಕ್ತರ ಮನಸ್ಸಿಗೆ ತೀವ್ರ ನೋವನ್ನುಂಟುಮಾಡಿದೆ. ಕಲಾದಗಿ ಶ್ರೀಮಠದ ಉತ್ತರಾಧಿಕಾರದ ವಿವಾಹ ಪ್ರಕರಣ ಇನ್ನೂ ಕೋರ್ಟ್‌ನಲ್ಲಿದೆ. ಸಮಾಜದ ಶಾಂತಿಗಾಗಿ ಕೋರ್ಟ್ ಯಥಾಸ್ಥಿತಿ ಕಾಯ್ದುಕೊಂಡು ಹೋಗಬೇಕೆಂಬ ಆದೇಶವಿದ್ದರೂ ಇದಕ್ಕೆ ವ್ಯತಿರಿಕ್ತವಾಗಿ ದುಷ್ಕೃತ್ಯ ನಡೆಸಿರುವುದು ಖಂಡನೀಯ. ಸರ್ಕಾರ ಈ ಘಟನೆಯನ್ನು ಗಂಭೀರವಾಗಿ ಪರಿಗಣಿಸಿ, ಇಂತಹ ಘಟನೆ ಮರುಕಳಿಸದಂತೆ ಕ್ರಮ ಕೈಗೊಳ್ಳಬೇಕು ಎಂದರು.

> ಈ ವೇಳೆ ಮಾಜಿ ಶಾಸಕ ಜಿ.ಎಂ. ಮಹಾಂತಶೆಟ್ಟರ ಮತ್ತು ಜಿ.ಎಸ್. ಗಡ್ಡದೇವರಮಠ ಮಾತನಾಡಿ, ರಂಭಾಪುರಿ ಜಗದ್ಗುರುಗಳ ಮೇಲೆ ನಡೆಸಿದ ಹೀನಕೃತ್ಯ ಖಂಡನೀಯ. ಈ ಘಟನೆಯಲ್ಲಿ ಪ್ರತ್ಯಕ್ಷ-ಪರೋಕ್ಷವಾಗಿ ಕಾರಣೀಕರ್ತರಾದವರನ್ನು ಪತ್ತೆ ಮಾಡಿ ಅವರಿಗೆ ಕಠಿಣ ಶಿಕ್ಷೆ ವಿಧಿಸಬೇಕು. ಜಗದ್ಗುರುಗಳು ಈ ಕೃತ್ಯದಿಂದ ಧೃತಿಗೆಡದೇ ಧರ್ಮ, ಸಂಸ್ಕೃತಿ ಕಾಪಾಡುವ ಕಾರ್ಯದಲ್ಲಿ ತೊಡಗಿಸಿಕೊಳ್ಳಲಿ. ಅವರೊಂದಿಗೆ ಜಾತ್ಯಾತೀತವಾಗಿ ನಾಡಿನ ಎಲ್ಲ ಭಕ್ತಸಮೂಹವಿದೆ ಎಂದರು.

ಈ ವೇಳೆ ಆನಂದ ಮೆಕ್ಕಿ, ಎಸ್.ಪಿ. ಬಳಿಗಾರ, ಕುಬೇರಪ್ಪ ಮಹಾಂತಶೆಟ್ಟರ, ರುದ್ರಸ್ವಾಮಿ ಘಂಟಾಮಠ, ಶ್ರೀಕಾಂತ ರೋಣದ, ಗಂಗಾಧರ ಮೆಣಸಿನಕಾಯಿ, ನಿಂಗಪ್ಪ ಬನ್ನಿ, ವೀರಣ್ಣ ಪವಾಡದ, ಎಂ.ಆರ್. ಪಾಟೀಲ, ವಿಜಯಕುಮಾರ ಹತ್ತಿಕಾಳ, ಚಂಬಣ್ಣ ಬಾಳಿಕಾಯಿ, ವಿರೂಪಾಕ್ಷಪ್ಪ ಆದಿ, ಶೇಖಪ್ಪ ಹುರಕಡ್ಲಿ, ಅಶೋಕ ಬಟಗುರ್ಕಿ, ಜಾಕೀರಹುಸೇನ ಹವಾಲ್ದಾರ, ಬಂಗಾರೆಪ್ಪ ಮುಳಗುಂದ, ಸೋಮನಗೌಡ ಪಾಟೀಲ, ಸುರೇಶ ರಾಚನಾಯ್ಕರ ಸೇರಿದಂತೆ ನೂರಾರು ಜನರು ಹಾಜರಿದ್ದರು.

## ಬಾಗೇವಾಡಿ ಗ್ರಾಮದಲ್ಲಿ ಸಂವಿಧಾನ ಜಾಗೃತಿ ಜಾಥಾ



■ **ವಿಜಯಸಾಕ್ಷಿ ಸುದ್ದಿ, ಮುಂಡರಗಿ**

ಮುಂಡರಗಿ ತಾಲೂಕು ಬಾಗೇವಾಡಿ ಗ್ರಾಮದಲ್ಲಿ ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮ ಜರುಗಿತು. ಗ್ರಾ.ಪಂ. ಅಧ್ಯಕ್ಷರಾದ ಮಲ್ಲಿಕಾರ್ಜುನ ಹಂಜಗಿ, ಉಪಾಧ್ಯಕ್ಷರಾದ ಶ್ರೀಮತಿ ತಿಪ್ಪವ್ವ ತಳವಾರ, ಎಲ್ಲ ಚುನಾಯಿತ ಸದಸ್ಯರು, ಸಮುದಾಯದ ಮುಖಂಡರು, ತಹಸೀಲ್ದಾರರು, ಕಾರ್ಯನಿರ್ವಾಹಕ ಅಧಿಕಾರಿಗಳು, ಸಹಾಯಕ ನಿರ್ದೇಶಕರು, ಗ್ರಾಮ ಮಟ್ಟದ ಅಧಿಕಾರಿಗಳು ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಿದರು.

## ಬೊಮ್ಮಸಾಗರ ಜಾತ್ರೆಯಲ್ಲಿ ಪ್ರಾಣಿ ಬಲಿ ನಿಷೇಧ

■ **ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ**

ಗಜೇಂದ್ರಗಡ ತಾಲೂಕ ಬೊಮ್ಮಸಾಗರ ಗ್ರಾಮದ ಶ್ರೀ ದುರ್ಗಾದೇವಿ ಜಾತ್ರೆಯ ಹಿನ್ನೆಲೆಯಲ್ಲಿ ಫೆಬ್ರವರಿ 20 ಬೆಳಗ್ಗೆಯಿಂದ ಫೆ. 22 ರ ಮಧ್ಯರಾತ್ರಿಯವರೆಗೆ ಸಾರ್ವಜನಿಕರು, ಭಕ್ತರು, ಕುರಿ, ಕೋಣ, ಆಡು, ಕೋಡು, ಇತ್ಯಾದಿ ಪ್ರಾಣಿಗಳನ್ನು ಮತ್ತು ಆಯುಧಗಳನ್ನು ತೆಗೆದುಕೊಂಡು ಬರುವದನ್ನು ಹಾಗೂ ಬಲಿ ಕೊಡುವದನ್ನು ನಿಷೇಧಿಸಿ ಗಜೇಂದ್ರಗಡ ತಹಸೀಲ್ದಾರ ಕಿರಣಕುಮಾರ ಜಿ. ಕುಲಕರ್ಣಿ ಆದೇಶ ಹೊರಡಿಸಿದ್ದಾರೆ.

### ಫೆ. 20, ಸಂತ ತ್ರಿಪದಿ ಕವಿ ಸರ್ವಜ್ಞ ಜಯಂತಿ ನಿಮಿತ್ತ ವಿಶೇಷ ಲೇಖನ

# ಸರ್ವರೊಳಗೊಬ್ಬ ಸಮೃದ್ಧ ಕವಿ

ಕನ್ನಡ ಸಾಹಿತ್ಯದಲ್ಲಿ ಅತ್ಯಂತ ಸಮೃದ್ಧ ಕವಿ ಎಂದು ಪ್ರಸಿದ್ಧಿ ಪಡೆದ ಹಾಗೂ ತ್ರಿಪದಿಗಳು ಎಂಬ ಮೂರು ಸಾಲಿನ ಕವನಗಳ ರಚನೆಗೆ ಹೆಸರುವಾಸಿಯಾಗಿರುವ ಸರ್ವಜ್ಞ ಅವರ ಜಯಂತಿಯನ್ನು ಫೆಬ್ರುವರಿ 20ಡಿಒಜಣ ಆಚರಿಸಲಾಗುತ್ತದೆ.

ಸರ್ವಜ್ಞ ಎಂದರೆ ಸಂಸ್ಕೃತದಲ್ಲಿ ಎಲ್ಲವನ್ನೂ ತಿಳಿದವ ಎಂದರ್ಥ. 'ಸರ್ವರೊಳು ಒಂದೊಂದು ನುಡಿ ಕಲಿತವನು' ಎಂಬ ಅರ್ಥ. ಅವರಿಗೆ ಇದು ಅನ್ವರ್ಥನಾಮ ಎಂದರೆ ಅತಿಶಯೋಕ್ತಿಯಲ್ಲ. ಈತ ಕನ್ನಡದ ತ್ರಿಪದಿ ಸಾಹಿತ್ಯದ ಪ್ರಮುಖ ಕವಿ. ಪ್ರಮುಖವಾಗಿ ತ್ರಿಪದಿಗಳೆಂಬ ಮೂರು ಸಾಲಿನ ವಚನಗಳನ್ನು ರಚಿಸಿರುವ ಈತನ ಕಾಲದ ಕುರಿತು ಹೆಚ್ಚು ತಿಳಿದಿಲ್ಲ. ಇತರ ಲೇಖಕರು ಅವನ ಬಗ್ಗೆ ಮಾಡಿರುವ ಪ್ರಸ್ತಾಪಗಳಿಂದ ಮತ್ತು ಸರ್ವಜ್ಞನ ಭಾಷಾ ಪ್ರಯೋಗದ ಲಕ್ಷಣಗಳ ಅಧ್ಯಯನದಿಂದ ಈತನು ಜೀವಿಸಿದ್ದ ಕಾಲ ಸುಮಾರಾಗಿ 17ನೇ ಶತಮಾನದ ಆದಿಭಾಗ ಎಂದು ಪ್ರತಿಪಾದಿಸಲಾಗಿದೆ.

ಹಾವೇರಿ ಜಿಲ್ಲೆಯ ರಟ್ಟೀಹಳ್ಳಿ ತಾಲ್ಲೂಕಿನ (ಹಿಂದಿನ ಹಿರೇಕೆರೂರು ತಾಲ್ಲೂಕು) ಅಬಲೂರು ಇವನ ಜನ್ಮಸ್ಥಳ. ಇದು ಈಗ ಸರ್ವಜ್ಞನ ಅಬಲೂರ ಮಾಸೂರು ಎಂದೇ ಪ್ರಸಿದ್ಧಿ ಪಡೆದಿದೆ. ಅವನ ಹೆತ್ತಮ್ಮ ಕುಂಬಾರ ಮಾಳೆ, ಪ್ರೀತಿಯಿಂದ ಅವನಿಗೆ ನಾಮಕರಣ ಮಾಡಿದ ಹೆಸರು ಪುಷ್ಪದತ್ತ. ಸಾಕು ತಾಯಿ ಮಲ್ಲಕ್ಕ. ತಂದೆ ಬಸವರಸ.

ಬಸವರಸನು ಹಾವೇರಿ ಜಿಲ್ಲೆಯ ಹಿರೇಕೇರೂರು ತಾಲ್ಲೂಕು ಮಾಸೂರಿನಲ್ಲಿ ವಾಸವಾಗಿದ್ದ ಆರಾಧ್ಯ ಬ್ರಾಹ್ಮಣ. ಎಷ್ಟೋ ದಿನಗಳಾದರೂ ಮಕ್ಕಳಾಗದಿದ್ದಾಗ ಮಲ್ಲಮ್ಮನನ್ನು ಸಮಾಧಾನ ಮಾಡಿ, ಪುತ್ರಸಂತಾನದ ವರ ಪಡೆಯಲು ಕಾಶಿ ವಿಶ್ವನಾಥನ ಕ್ಷೇತ್ರಕ್ಕೆ ಹೊರಡುತ್ತಾನೆ. ಭಕ್ತಿಯಿಂದ ಸೇವೆ ಮಾಡಿದ ಬಸವರಸನಿಗೆ ಕಾಶಿ ವಿಶ್ವನಾಥನು ಕನಸಿನಲ್ಲಿ ಪ್ರತ್ಯಕ್ಷನಾಗಿ, 'ನಿನಗೆ ಪುತ್ರಪ್ರಾಪ್ತಿಯಾಗುವುದು. ಹುಟ್ಟುವ ಮಗನು ನನ್ನ ಪ್ರಸಾದದಿಂದ ಮಹಾಜ್ಞಾನಿಯಾಗುವನು' ಎಂದು ಹೇಳುತ್ತಾನೆ. ಆನಂದಭರಿತನಾದ ಬಸವರಸನು, ಪ್ರಾತಃಕಾಲದಲ್ಲಿ ಎದ್ದು, ಪವಿತ್ರ ಗಂಗಾಸ್ನಾನ ಮಾಡಿ, ವಿಶ್ವನಾಥನಿಗೆ ಪೂಜೆ ಅರ್ಪಿಸಿ, ಪ್ರಸಾದಗಳೊಂದಿಗೆ ತನ್ನ ಗ್ರಾಮದ ಕಡೆಗೆ ಹಾದಿ ಹಿಡಿಯುತ್ತಾನೆ.



ಹೀಗೆಯೇ ಹಗಲಿರುಳು ಪ್ರಯಾಣ ಮಾಡಿ ಅನೇಕ ಗ್ರಾಮಗಳಲ್ಲಿ ವಿಶ್ರಮಿಸಿ, ದಾರಿಯಲ್ಲಿ ಸಿಕ್ಕ 'ಅಬಲೂರ' ಎಂಬ ಗ್ರಾಮಕ್ಕೆ ಬರುವಾಗ ಭಯಂಕರ ಗುಡುಗು, ಸಿಡಿಲುಗಳಿಂದ ಮಳೆ ಸುರಿಯುತ್ತಿತ್ತು. ಸಮೀಪದಲ್ಲಿದ್ದ ಕುಂಬಾರಸಾಲೆಯಲ್ಲಿ ಕುಂಬಾರ ಮಾಳಿ ಎಂಬುವಳ ಮನೆಯಲ್ಲಿ ವಸತಿ ಮಾಡಿದನು. ಕಾಲಧರ್ಮ ಸಂಯೋಗದಿಂದ ಮಾಳಿಯಲ್ಲಿ ವ್ಯಾಮೋಹಗೊಂಡ ಬಸವರಸನಿಗೆ ಕಾಮ ವಿಕಾರವಾಯಿತು.

ಕಾಶಿಯಿಂದ ತಂದ ತೀರ್ಥ ಪ್ರಸಾದಗಳನ್ನು ಕೊಟ್ಟು ಅವಳ ಸಂಗ ಮಾಡಿದನು. 9 ತಿಂಗಳ ನಂತರ ಮಾಳಿಯು, ದಿವ್ಯ ತೇಜಸ್ಸಿನ ಗಂಡು ಕೂಸಿಗೆ ಜನ್ಮ ನೀಡುತ್ತಾಳೆ. ಅವನಿಗೆ 'ಪುಷ್ಪದತ್ತ'ನೆಂದು ನಾಮಕರಣವೂ ಮಾಡುತ್ತಾರೆ. ಮುಂದೆ ಈ ಮಗುವೇ ಜಗತ್ತಿಗೆ ಸರ್ವಜ್ಞನೆಂದು ಪ್ರಸಿದ್ಧಿಯಾದನು ಎಂದು ಪ್ರತೀತಿ ಇದೆ. ಇವನು ಬಾಲ್ಯದಲ್ಲಿಯೇ ಅಗಾಧವಾದ ಪಾಂಡಿತ್ಯವನ್ನು ಶಿವನ ವರಪ್ರಸಾದದಿಂದ ಪಡೆದಿದ್ದನು.

ವಿಸ್ತಾರವಾದ ಲೋಕಾನುಭವ, ವಿಶಾಲವಾದ ಜೀವನ ದೃಷ್ಟಿಯನ್ನು ಪಡೆದ ಇವರು 'ಸರ್ವಜ್ಞ' ಎಂಬ ಅಂಕಿತದಿಂದ ಮುಕ್ತಾಯವಾಗುವ ತ್ರಿಪದಿಗಳನ್ನು ರಚಿಸಿದ್ದಾರೆ. ಕನ್ನಡ ಸಾಹಿತ್ಯದಲ್ಲಿ ಸರ್ವಜ್ಞನ ವಚನಗಳು ಬಹಳ ಜನಪ್ರಿಯವಾಗಿವೆ. ಇವರ ವಚನಗಳು ತುಂಬಾ ಸರಳವಾಗಿದ್ದು, ಜನಸಾಮಾನ್ಯರಿಗೆ ಸುಲಭವಾಗಿ ಅರ್ಥವಾಗುತ್ತವೆ. ಇವರು ಅಪಾರ ಜೀವನಾನುಭವದಿಂದ ಬರೆದ ಮೂರು ಪಂಕ್ತಿಗಳ ತ್ರಿಪದಿ ಛಂದಸ್ಸು ಕಾವ್ಯ ಜನಮನದಲ್ಲಿ ಬೇರು ಬಿಟ್ಟಿದೆ.

ಸುಮಾರು 1000 ತ್ರಿಪದಿಗಳು ಸರ್ವಜ್ಞನ ಹೆಸರಿನಲ್ಲಿ ದಾಖಲಾಗಿವೆ. ಚರಿತ್ರಜ್ಞರ ಪ್ರಕಾರ ಇವುಗಳಲ್ಲಿ ಕೆಲವು ತ್ರಿಪದಿಗಳು ನಂತರದ ಕಾಲದಲ್ಲಿ ಬೇರೆ ಬೇರೆ ಲೇಖಕರಿಂದ ಬರೆಯಲ್ಪಟ್ಟಿರಬಹುದು. ಸರ್ವಜ್ಞನ ತ್ರಿಪದಿಗಳು ತಮ್ಮ ಸರಳತೆ ಮತ್ತು ಪ್ರಾಸಬದ್ಧತೆಯಿಂದ ಜನಪ್ರಿಯವಾಗಿವೆ. ಈ ತ್ರಿಪದಿಗಳು ಮುಖ್ಯವಾಗಿ ನೈತಿಕ, ಸಾಮಾಜಿಕ ಮತ್ತು ಧಾರ್ಮಿಕ ವಿಷಯಗಳನ್ನು ಕುರಿತಾಗಿವೆ. ಹಲವು ಒಗಟುಗಳು ಸಹ ಸರ್ವಜ್ಞನ ತ್ರಿಪದಿಗಳಲ್ಲಿ ಸೇರಿವೆ.

ಒಟ್ಟಾರೆಯಾಗಿ, ಕವಿ ಸರ್ವಜ್ಞನ ವಚನಗಳು ಸಾಮಾಜಿಕ ಸುಧಾರಣೆಯು, ಜಾತ್ಯಾತೀತ, ಮಾನವೀಯ ಮೌಲ್ಯ ಹಾಗೂ ಸರ್ವಕಾಲಿಕ ಸತ್ಯವನ್ನು ಪ್ರತಿಪಾದಿಸುವಂತಹ ವಚನಗಳಾಗಿವೆ. ಸರಳ, ಸಜ್ಜನಿಕೆ ಹಾಗೂ ಆದರ್ಶ ಗುಣಗಳನ್ನು ಹೊಂದಿದ್ದ ಸರ್ವಜ್ಞ ಸುಂದರ ಹಾಗೂ ಆದರ್ಶ ಸಮಾಜ ನಿರ್ಮಿಸಲು ನಿರಂತರವಾಗಿ ಶ್ರಮಿಸಿದ್ದಾರೆ. ಹಾಗೆಯೇ ಸರ್ವಕಾಲಿಕ ಸತ್ಯವನ್ನು ಪ್ರತಿಪಾದಿಸಿದ ಕವಿ ಸರ್ವಜ್ಞನ ವಚನಗಳು ಇಂದಿನ ಮಕ್ಕಳಿಗೆ, ಯುವಜನಾಂಗಕ್ಕೆ ಹಾಗೂ ಸಮಾಜಕ್ಕೆ ದಾರಿದೀಪಗಳಾಗಿವೆ.



**– ಬಸವರಾಜ ಎಮ್.ಯರಗುಪ್ಪಿ.**
ಬಿಆರ್‌ಪಿ–ಶಿರಹಟ್ಟಿ, ಲಕ್ಷ್ಮೇಶ್ವರ.

## ರಕ್ತದ ಗುಂಪು ತಪಾಸಣಾ ಶಿಬಿರ




■ **ವಿಜಯಸಾಕ್ಷಿ ಸುದ್ದಿ, ಗದಗ**

ಮಕ್ಕಳು ಸತ್ವಯುತ, ಪೌಷ್ಠಿಕಾಂಶಯುಕ್ತ ಆಹಾರ ಸೇವನೆಯಿಂದ ಉತ್ತಮ ಆರೋಗ್ಯ ಹೊಂದಬೇಕು. ಮಕ್ಕಳಿಗೆ ಆರೋಗ್ಯ ಜಾಗೃತಿ ಅವಶ್ಯವಾಗಿದ್ದು, ಬೇಸಿಗೆಯ ದಿನಗಳಲ್ಲಿ ಬಿಸಿಲಿನಿಂದ ತಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳಬೇಕೆಂದು ಶ್ರೀಧರ ಸುಲ್ತಾನಪೂರ ಹೇಳಿದರು.

ರೋಟರಿ ಕ್ಲಬ್ ಗದಗ–ಬೆಟಗೇರಿ ಹಾಗೂ ಬಸವೇಶ್ವರ ರಕ್ತ ಕೇಂದ್ರದ ವತಿಯಿಂದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ನಂ.8 ಹಾಗೂ 5ರ ಮಕ್ಕಳಿಗೆ ಉಚಿತವಾಗಿ ರಕ್ತ ಗುಂಪು ತಪಾಸಣೆ ಮಾಡಿ ಗುರುತಿನ ಚೀಟಿಗಳನ್ನು ವಿತರಿಸಿ ಅವರು ಮಾತನಾಡಿದರು.

ಸಂಸ್ಥೆಯ ಕಾರ್ಯದರ್ಶಿ ವೀಣಾ ತಿರ್ಲಾಪೂರ ಮಾತನಾಡಿ, ಸಮತೋಲಿತ ಆಹಾರವು ನಮ್ಮನ್ನು ಸದೃಢರನಾಗಿಸುತ್ತದೆ. ನಮ್ಮ ರಕ್ತದ ಗುಂಪನ್ನು ನಾವು ತಿಳಿದಿರುವುದು ಅವಶ್ಯವಾಗಿದೆಯೆಂದರು.

ರೋಟರಿ ಕ್ಲಬ್ ಗದಗ–ಬೆಟಗೇರಿ ಹಾಗೂ ಬಸವೇಶ್ವರ ರಕ್ತ ಕೇಂದ್ರದ ವತಿಯಿಂದ 180 ವಿದ್ಯಾರ್ಥಿಗಳ ರಕ್ತದ ಗುಂಪನ್ನು ತಪಾಸಣೆ ಮಾಡಿ ಗುರುತಿನ ಕಾರ್ಡ್‌ಗಳನ್ನು ವಿತರಿಸಲಾಯಿತು. ರೊ. ಶಿವಾಚಾರ್ಯ ಹೊಸಳ್ಳಿಮಠ ಸ್ವಾಗತಿಸಿದರು. ರೊ. ಅಕ್ಷಯ ಶೆಟ್ಟಿ ಕಾರ್ಯಕ್ರಮ ನಿರೂಪಿಸಿದರು. ಶಾಲೆಯ ಮುಖ್ಯೋಪಾಧ್ಯಾಯ ಹೆಚ್.ಡಿ. ಹನಮಂತಗೌಡರ, ಬಿ.ಡಿ. ತಳವಾರ, ಶಿಕ್ಷಕ ವೃಂದದವರು ಹಾಗೂ ಬಸವೇಶ್ವರ ರಕ್ತ ಕೇಂದ್ರದ ನಿರ್ದೇಶಕ ರೊ. ಅನಿಲಕುಮಾರ ಹಂದ್ರಳಾ ಉಪಸ್ಥಿತರಿದ್ದರು. ಕವಿತಾ ದಂಡಿನ ವಂದಿಸಿದರು.




■ **ವಿಜಯಸಾಕ್ಷಿ ಸುದ್ದಿ, ಗದಗ**

ಗದುಗಿನ ಮಾಲಿಪಾಟೀಲ್ ಫೌಂಡೇಶನ್ ಟ್ರಸ್ಟ್ ಕಾರ್ಯಾಲಯದಲ್ಲಿ ವಿಶ್ವಗುರು ಜಗಜ್ಯೋತಿ ಬಸವಣ್ಣನವರ ಭಾವಚಿತ್ರಕ್ಕೆ ವಿಶೇಷ ಪೂಜೆ ಸಲ್ಲಿಸಿ ಗೌರವ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಟ್ರಸ್ಟ್ ಅಧ್ಯಕ್ಷ ನಿಂಗನಗೌಡ ಎಸ್.ಮಾಲಿಪಾಟೀಲ್, ಹಿರಿಯ ಮುಖಂಡರಾದ ಶರಣಯ್ಯ ರುದ್ರಸ್ವಾಮಿಮಠ, ಟ್ರಸ್ಟ್ ಪ್ರಧಾನ ಕಾರ್ಯದರ್ಶಿ ವಿದ್ಯಾಶ್ರೀ ಎನ್.ಮಾಲಿಪಾಟೀಲ್, ಮುಖಂಡರಾದ ಜಾವೇದಸಾಬ ಎಮ್.ಜೆ., ಮಂಜುನಾಥ್ ಮಾಲಿಪಾಟೀಲ್, ಸೋಮಶೇಖರ್ ಭೀಮನಗೌಡ ಮಾಮಪಾಟೀಲ್ ಮುಂತಾದವರಿದ್ದರು.

## ಸ್ವಾಭಿಮಾನಿ ಕರವೇ ಜಿಲ್ಲಾ ಗೌರವಾಧ್ಯಕ್ಷರಾಗಿ ನೇಮಕ

■ **ವಿಜಯಸಾಕ್ಷಿ ಸುದ್ದಿ, ಗದಗ**



ಸ್ವಾಭಿಮಾನಿ ಕರ್ನಾಟಕ ರಕ್ಷಣಾ ವೇದಿಕೆ ಅಧ್ಯಕ್ಷರಾದ ಎಂ.ಎ. ಕುರ್ತಕೋಟಿಯವರು ಮಾಬುಸಾಬ ಫಕೀರಸಾಬ ಗುದಗನೂರವರ ಸಾಮಾಜಿಕ ಸೇವೆಯನ್ನು ಪರಿಗಣಿಸಿ ತಾಯಿ ಭುವನೇಶ್ವರಿಯ ಹಾಗೂ ಈ ನಾಡಿನ ಸೇವೆಯನ್ನು ಮಾಡಲು ಸ್ವಾಭಿಮಾನಿ ಕರ್ನಾಟಕ ರಕ್ಷಣಾ ವೇದಿಕೆ ಗದಗ ಜಿಲ್ಲಾ ಗೌರವಾಧ್ಯಕ್ಷರನ್ನಾಗಿ ನೇಮಕ ಮಾಡಿ ಆದೇಶ ಪತ್ರ ನೀಡಿದ್ದಾರೆ.

ಗದಗ ಜಿಲ್ಲೆಯಲ್ಲಿ ಸಂಘಟನೆಯನ್ನು ಬಲಪಡಿಸಲು ಸಂಪೂರ್ಣವಾಗಿ ಶ್ರಮಿಸಬೇಕು, ವೇದಿಕೆಯ ಹೋರಾಟಗಳಲ್ಲಿ ಭಾಗವಹಿಸಿ ಜಲ, ನೆಲ, ಕನ್ನಡ ಭಾಷೆಗೆ ಧಕ್ಕೆ ಬಂದಾಗ ಮತ್ತು ಅನ್ಯಾಯಗಳು ನಡೆದಾಗ ಹೋರಾಟಗಳಲ್ಲಿ ಪಾಲ್ಗೊಳ್ಳುವಂತೆ ಸೂಚಿಸಿದ್ದಾರೆ.

## 'ಪುಷ್ಠಿ' ಎಳೆಯರ ಬೆಳವಣಿಗೆಗೆ ಪೂರಕ



■ **ವಿಜಯಸಾಕ್ಷಿ ಸುದ್ದಿ, ಗದಗ**


ಸದೃಢ ಮನಸ್ಸಿಗೆ ಸದೃಢ ದೇಹ ಬೇಕು. ಇದಕ್ಕಾಗಿ ಸರ್ವಸಮತೋಲನದ ಆಹಾರ ಕಿಟ್ 'ಪುಷ್ಠಿ' ಎಳೆಯರ ಬೆಳವಣಿಗೆಗೆ ಪೂರಕವಾಗಿದೆ. ಮೂರು ವರ್ಷದಲ್ಲಿ ಬೆಳೆದ ಮಗು ನೂರು ವರ್ಷದವರೆಗೂ ಸುಖವಾಗಿರುತ್ತದೆ. ತಾಯಂದಿರು ಸಮಯಕ್ಕೆ ಸರಿಯಾಗಿ ಮಕ್ಕಳಿಗೆ ಉಣಿಸಿದರೆ ಸಮರ್ಥ, ಸದೃಢ, ಸುಂದರ ಮಗುವಾಗುತ್ತದೆ ಎಂದು ಪ್ರಧಾನ ಗುರುಗಳಾದ ಎ.ವಿ. ಪ್ರಭು ಹೇಳಿದರು.

ಇಲ್ಲಿನ ಹುಲಕೋಟಿ ಆಶ್ರಯ ಕಾಲೋನಿಯ ಅಂಗನವಾಡಿ ಕೇಂದ್ರದಲ್ಲಿ ಸಮತೋಲಿತ ಆಹಾರ 'ಪುಷ್ಠಿ' ಕಿಟ್ ವಿತರಣೆ ಮತ್ತು ಮಗಟ್ವಿನ ಬೆಳವಣಿಗೆ ಜಾಗೃತಿ ಕಾರ್ಯಕ್ರಮದಲ್ಲಿ ವರು ಮಾತನಾಡಿದರು.

ಗುಂಪು ಸಂಯೋಜಕರಾದ ಸಾವಿತ್ರಿ ಹೆರಕಲ್ಲ ಮಾತನಾಡಿ, ಆರೋಗ್ಯಕರ ಚಟುವಟಿಕೆಗೆ ಉತ್ತಮ ವಾತಾವರಣ ಅವಶ್ಯಕವಾಗಿದೆ ಎಂದರು. ರೇಣುಕಾ ಕೋರಿ ಮತ್ತು ದ್ರಾಕ್ಷಾಯಣಿ ಚೆನ್ನಾರಿ ವೇದಿಕೆಯಲ್ಲಿ ಹಾಜರಿದ್ದರು. ಬಾಲವಿಕಾಸ ಅಧ್ಯಕ್ಷ ನೂರಜಾನ ಅನ್ಸಾರಿ ಸಭೆಯ ಅಧ್ಯಕ್ಷತೆ ವಹಿಸಿದ್ದರು. ಅಂಗನವಾಡಿ ಶಿಕ್ಷಕಿ ಪೂರ್ಣಿಮಾ ಪತ್ತಾರ ಸ್ವಾಗತಿಸಿ ವಂದಿಸಿದರು.

## ಸಮಾಜವಿಜ್ಞಾನ ನೈಜತೆಯ ಪ್ರತೀಕ

■ **ವಿಜಯಸಾಕ್ಷಿ ಸುದ್ದಿ, ಗದಗ**



ಸಮಾಜವಿಜ್ಞಾನ ವಿಷಯದಲ್ಲಿ ಇತಿಹಾಸ, ಪೌರನೀತಿ ಹಾಗೂ ಭೂಗೋಳ ವಿಷಯದ ಬಗ್ಗೆ ವಿದ್ಯಾರ್ಥಿಗಳು ಹೆಚ್ಚು–ಹೆಚ್ಚು ಅಧ್ಯಯನ ಮಾಡಿ ಇತಿಹಾಸದ ಬಗ್ಗೆ ಹಾಗೂ ಮೂಲಭೂತ ಹಕ್ಕು ಮತ್ತು ಕರ್ತವ್ಯಗಳ ಬಗ್ಗೆ ಅರ್ಥೈಸಿಕೊಂಡು ಅನುಷ್ಠಾನ ಗೊಳಿಸಿಕೊಳ್ಳುವ ಅಗತ್ಯತೆ ಇಂದಿನ ದಿನಗಳಲ್ಲಿ ಪ್ರಮುಖವಾಗಿದೆ. ಕಾರಣ ಎಲ್ಲ ವಿದ್ಯಾರ್ಥಿಗಳು ಸಾಮಾಜಿಕ, ಆರ್ಥಿಕ, ಧಾರ್ಮಿಕ ವಿಷಯಗಳನ್ನು ಅಧ್ಯಯನ ಮಾಡಬೇಕು. ಸಮಾಜವಿಜ್ಞಾನ ವಿಷಯ ಸುಳ್ಳುಗಳ ಸರಮಾಲೆಯಲ್ಲ, ನೈಜತೆಯ ಪ್ರತೀಕ ಎಂದು ಶ್ರೀ ಜ. ತೋಂಟದಾರ್ಯ ವಿದ್ಯಾಪೀಠದ ಕಾರ್ಯದರ್ಶಿ ಎಸ್.ಎಸ್. ಪಟ್ಟಣಶೆಟ್ಟರ ಹೇಳಿದರು.

ಗದಗ ಶಹರ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ವತಿಯಿಂದ ನಡೆದ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ ಆರನೇ ದಿನದ ನೇರ ಫೋನ್ ಇನ್ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ವಿದ್ಯಾರ್ಥಿಗಳು ಹೆಚ್ಚಾಗಿ ಮಹಿಳೆಯರ ಸ್ಥಾನಮಾನ, ನಕಾಶೆಗಳು, ಅನ್ವಯಿಕ ಪ್ರಶ್ನೆಗಳು, ಸಮಾಜವಿಜ್ಞಾನ ವಿಷಯದಲ್ಲಿ ಬರುವ ವಿವಿಧ ವ್ಯತ್ಯಾಸಗಳ ಬಗ್ಗೆ ಹಾಗೂ ನೂರಕ್ಕೆ ನೂರು ಅಂಕಗಳನ್ನು ಗಳಿಸುವ ಕೌಶಲ ಮುಂತಾದವುಗಳ ಬಗ್ಗೆ ಪ್ರಶ್ನೆಗಳನ್ನು ಕೇಳಿ ಪರಿಹಾರ ಪಡೆದುಕೊಂಡರು.

ಈ ಸಂದರ್ಭದಲ್ಲಿ ಭಾಗವಹಿಸಿದ ಸಮಾಜವಿಜ್ಞಾನ ವಿಷಯದ ಸಂಪನ್ಮೂಲ ವ್ಯಕ್ತಿಗಳು ಮಕ್ಕಳಿಗೆ ಪರೀಕ್ಷೆ ಮುಗಿಯುವವರೆಗೆ ಸತತ ಬೆಂಬಲದ ಭರವಸೆ ನೀಡಿದರು. ಕಾರ್ಯಕ್ರಮದಲ್ಲಿ ಕ್ಷೇತ್ರ ಸಮನ್ವಯಾಧಿಕಾರಿ ಹೆಚ್.ಎ. ಫಾರೂಕಿ, ಶಿಕ್ಷಣ ಸಂಯೋಜಕರಾದ ಶ್ಯಾಮ ಲಾಂಡೆ, ಐ.ಬಿ. ಮಡಿವಾಳರ, ಕ್ಷೇತ್ರ ಸಂಪನ್ಮೂಲ ವ್ಯಕ್ತಿಗಳಾದ ಪಿ.ಡಿ. ಮಂಗಳೂರ, ಸಂಪನ್ಮೂಲ ಶಿಕ್ಷಕರಾಗಿ ಬಸವರಾಜ ಕುಂಬಾರ, ವೈ.ಎಸ್. ಬೊಮ್ಮನಾಳ, ಗಂಗಾಧರಯ್ಯ, ಎಂ.ಎ. ಶಿವಳ್ಳಿ ಭಾಗವಹಿಸಿದ್ದರು.

ತೋಂಟದಾರ್ಯ ಪ್ರೌಢ ಶಾಲೆಯ ಶಿಕ್ಷಕರಾದ ಕೆ.ಎಮ್. ಗೌಡರ ಹಾಗೂ ತೋಂಟದಾರ್ಯ ಪ್ರಾಥಮಿಕ ಶಾಲೆಯ ಪ್ರಧಾನ ಗುರುಗಳಾದ ನಾಗರಾಜ ಗಾಳಿ ಉಪಸ್ಥಿತರಿದ್ದರು.

> ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಎಸ್. ಬುರಡಿ ಮಾತನಾಡಿ, ವಿದ್ಯಾರ್ಥಿಗಳು ವರ್ಷದ ಪ್ರಾರಂಭದಿಂದ ವರ್ಗ ಕೊಠಡಿಗಳಲ್ಲಿ ಮಾಡಿದ ಇತಿಹಾಸ ವಿಷಯದ ಯೋಜನಾ ಕಾರ್ಯ, ವಿವಿಧ ರಾಷ್ಟ್ರಗಳ ನಕಾಶೆಗಳು, ಅತ್ಯಂತ ಪ್ರಮುಖವಾದ ಇಸ್ವಿಗಳು, ತಪ್ಪಿಲ್ಲದಂತೆ ನೆನಪಿನಲ್ಲಿಟ್ಟುಕೊಂಡು ಪರೀಕ್ಷೆಯಲ್ಲಿ ಕೇಳಿದ ಪ್ರಶ್ನೆಗೆ ವಿವರವಾದ, ಆಕರ್ಷಕವಾದ ಬರವಣಿಗೆಯ ಮೂಲಕ ಉತ್ತರಿಸುವಂತೆ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ಮಾಡಿದರು.

## ಮಕ್ಕಳ ಕಲಿಕಾ ಆಸಕ್ತಿಗೆ ತಕ್ಕಂತೆ ಪ್ರೋತ್ಸಾಹ ನೀಡಬೇಕು

■ **ವಿಜಯಸಾಕ್ಷಿ ಸುದ್ದಿ, ರೋಣ**



ಮಕ್ಕಳ ಕಲಿಕಾ ಆಸಕ್ತಿಯನ್ನು ಗಮನಿಸಿ ಅವರ ಆಸಕ್ತಿಗೆ ತಕ್ಕಂತೆ ಪ್ರೋತ್ಸಾಹ ನೀಡಬೇಕು, ಅಂದಾಗ ಮಾತ್ರ ಮಕ್ಕಳಲ್ಲಿ ಇರುವ ಸೃಜನಶೀಲತೆ ಹೊರ ಬರಲು ಸಾಧ್ಯ ಎಂದು ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ರವಿ ಎ.ಎನ್ ಅಭಿಪ್ರಾಯ ವ್ಯಕ್ತಪಡಿಸಿದರು.

ಸೋಮವಾರ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಇಲಾಖೆ ಹಾಗೂ ಭಾರತ ಜ್ಞಾನ ವಿಜ್ಞಾನ ಸಮಿತಿ ಇವರ ಸಂಯುಕ್ತ ಆಶ್ರಯದಲ್ಲಿ ಫೆಬ್ರವರಿ 21 ರಿಂದ 24 ರವರೆಗೆ 3 ದಿನಗಳ ಮಕ್ಕಳ ಸಾಹಿತ್ಯ ಸಂಭ್ರಮವನ್ನು ಚಿಕ್ಕಮಣ್ಣೂರು ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನಡೆಸಲು ಪೂರ್ವಭಾವಿ ಸಭೆಯಲ್ಲಿ ತೀರ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ತಾಲೂಕು ಪಂಚಾಯತ್ ಕಾರ್ಯ ನಿರ್ವಾಹಕ ಅಧಿಕಾರಿ ರವಿ.ಎ.ಎನ್, ಉತ್ತಮ ಸಮಾಜ ಕಟ್ಟಬೇಕು ಅಂದರೆ ನಾವು ಮಕ್ಕಳಿಗೆ ಯೋಗ್ಯ ಶಿಕ್ಷಣ ನೀಡಬೇಕು, ಮಕ್ಕಳು ಚಿಕ್ಕವರಿದ್ದಾಗಲೆ ಅವರಲ್ಲಿರುವ ಪ್ರತಿಭೆ ಗುರುತಿಸಿ ಅದಕ್ಕೆ ತಕ್ಕಂತೆ ಶಿಕ್ಷಣ ಕೊಡುವುದು ನಮ್ಮ ಕರ್ತವ್ಯ. ಶಿಕ್ಷಣದ ಉದ್ದೇಶ

ಸಾರ್ಥಕವಾಗಬೇಕಾದರೆ ಇಂತಹ ಕಾರ್ಯಕ್ರಮ ಅವಶ್ಯ, ಇದರ ಜೊತೆಗೆ ಮಕ್ಕಳಲ್ಲಿ ಅಡಗಿರುವ ಸಾಮರ್ಥ್ಯದ ಅಭಿವೃದ್ಧಿ ಸಹ ಆಗುತ್ತದೆ. ಮಕ್ಕಳಿಗೆ ಸೂಕ್ತವಾದ ವೇದಿಕೆ ಕಲ್ಪಿಸಿಕೊಡುವ ಕೆಲಸವಾಗಬೇಕು ಇಲ್ಲದೇ ಹೋದರೆ ಸಮಾಜಕ್ಕೆ, ರಾಷ್ಟ್ರಕ್ಕೆ ನಷ್ಟವಾಗುತ್ತದೆ ಎಂದರು.

ಮಕ್ಕಳ ಸರ್ವತೋಮುಖ ಕಲಿಕೆಗೆ ಪೂರಕವಾಗಿ ಕಥೆ ಕಟ್ಟೋಣ, ಕವಿತೆ ರಚಿಸೋಣ, ನಾಟಕ ರಚನೆ, ವರದಿ ಮಾಡುವಿಕೆ ಕುರಿತು ಮಕ್ಕಳಿಗೆ 3 ದಿನಗಳ ಕಾರ್ಯಾಗಾರ ಮಾಡಲಾಗುತ್ತದೆ. 100 ಕ್ಕೂ ಹೆಚ್ಚು ಮಕ್ಕಳು ಈ ಕಾರ್ಯಾಗಾರದಲ್ಲಿ ಭಾಗವಹಿಸುತ್ತಾರೆ.

ಮಕ್ಕಳಲ್ಲಿ ಇರುವ ಕ್ರಿಯಾಶೀಲತೆ ಸಂಪನ್ಮೂಲ ವ್ಯಕ್ತಿಗಳು ಮಾರ್ಗದರ್ಶನ ಮಾಡುತ್ತಾರೆ ಎಂದು ಎಫ್.ಸಿ.ಚೇಗರಡ್ಡಿ ತಿಳಿಸಿದರು.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ರಶೀದ್ ಹುಣಸಿಮರದ ಹಾಗೂ ವಿವಿಧ ಶಾಲೆಯ ಮುಖ್ಯೋಪಾಧ್ಯಾಯರಾದ ಎಸ್.ವಿ.ಮಾಳವಾಡ, ಎಸ್.ಬಿ.ಹಿರೇಮಠ, ಎನ್.ಆರ್. ಬೇವಿನಮರದ, ಎಸ್.ಜೆ.ಹಿರೇಮಠ, ಶ್ರೀಮತಿ ಎಲ್.ಸಿ.ಮುಂಡೆವಾಡ, ಮಹೇಶಗೌಡ ಪಾಟೀಲ್, ಎಮ್ ಕೆ ಜಮಖಾನದ, ವಿಠ್ಠಲ ಅಬ್ಬಿಗೇರಿ, ಎಚ್.ಎನ ಭಜಂತ್ರಿ, ಸಿ.ಎಸ್ ಪರಡ್ಡಿ ಸೇರಿದಂತೆ ಮುಂತಾದವರು ಭಾಗವಹಿಸಿದ್ದರು.

## ಮುರಡಿ ಗ್ರಾಮದಲ್ಲಿ ಸಂವಿಧಾನ ಜಾಗೃತಿ ಜಾಥಾ



■ **ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯ ಮುಂಡರಗಿ ತಾಲೂಕು ಮುರಡಿ ಗ್ರಾಮದಲ್ಲಿ ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮ ಜರುಗಿತು.

ಗ್ರಾ.ಪಂ. ಅಧ್ಯಕ್ಷರಾದ ಶ್ರೀಮತಿ ಶೋಭಾ ಚಂದ್ರಶೇಖರ್ ಕೊಡ್ಲಿ, ಉಪಾಧ್ಯಕ್ಷರಾದ ಶ್ರೀಮತಿ ರೇಖಾ ಭಜಂತ್ರಿ, ಸಮುದಾಯದ ಮುಖಂಡರು, ತಹಸೀಲ್ದಾರ, ಕಾರ್ಯನಿರ್ವಾಹಕ ಅಧಿಕಾರಿ, ಗ್ರಾ.ಪಂ. ಅಭಿವೃದ್ಧಿ ಅಧಿಕಾರಿ, ಸಹಾಯಕ ನಿರ್ದೇಶಕರು, ಗ್ರಾಮ ಮಟ್ಟದ ಅಧಿಕಾರಿಗಳು ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಿದರು.

ಡಾ. ತೋಂಟದ ಸಿದ್ಧಲಿಂಗ ಶ್ರೀಗಳ 75ನೇ ಜಯಂತಿ-ಶ್ರೀಗಳ ಕುರಿತ ಪುಸ್ತಕ ಬಿಡುಗಡೆ

# ಭಾವೈಕ್ಯತಾ ದಿನಾಚರಣೆ ನಾಳೆ

■ವಿಜಯಸಾಕ್ಷಿ ಸುದ್ದಿ, ಗದಗ

ಕನ್ನಡ ಕುಲಗುರುಗಳು, ತ್ರಿವಿಧ ದಾಸೋಹಿಗಳು, ಬಸವ ತತ್ವದ ದಂಡನಾಯಕರು ಹಾಗೂ ಭಾವೈಕ್ಯತೆಯ ಹರಿಕಾರರೂ ಆದ ಪೂಜ್ಯಶ್ರೀ ಲಿಂಗೈಕ್ಯ ಡಾ. ತೋಂಟ-ದ ಸಿದ್ಧಲಿಂಗ ಮಹಾಸ್ವಾಮಿಗಳ 75ನೇ ಜಯಂತಿ ಅಂಗವಾಗಿ 'ಭಾವೈಕ್ಯತಾ ದಿನಾಚರಣೆ' ಕಾರ್ಯಕ್ರಮ ದಿ. 21ರಂದು ಬುಧವಾರ ಮುಂಜಾನೆ 10.30ಕ್ಕೆ ನಗರದ ತೋಂಟದಾರ್ಯ ಮಠದಲ್ಲಿ ಜರುಗಲಿದೆ.

ಭಾವೈಕ್ಯತೆಯ ಹರಿಕಾರರಾಗಿದ್ದ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ 75ನೇ ಜಯಂತಿಯ ಅಂಗವಾಗಿ ಅಂದು ಬೆಳಿಗ್ಗೆ 8.30ಕ್ಕೆ ಭೀಷ್ಮ ಕೆರೆಯ ಬಸವೇಶ್ವರ ಮುತ್ಥಳಿಯಿಂದ ಶ್ರೀ ತೋಂಟದಾರ್ಯ ಮಠದವರೆಗೆ ಭಾವೈಕ್ಯತಾ ಯಾತ್ರೆ ಜರುಗುವುದು.



ಕಾರ್ಯಕ್ರಮದ ಸಾನ್ನಿಧ್ಯವನ್ನು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ವಹಿಸುವರು. ಸಮ್ಮುಖವನ್ನು ಮುಂಡರಗಿ ತೋಂಟದಾರ್ಯ ಶಾಖಾ ಮಠದ ನಿಜಗುಣಪ್ರಭು ತೋಂಟದಾರ್ಯ ಮಹಾಸ್ವಾಮಿಗಳು, ಶಿರೋಳ-ಭೈರನಹಟ್ಟಿಯ ಶಾಂತಲಿಂಗ ಮಹಾಸ್ವಾಮಿಗಳು, ಆಳಂದದ ಕೋರಣೇಶ್ವರ ಮಹಾಸ್ವಾಮಿಗಳು, ಸಂಡೂರಿನ ಪ್ರಭು ಮಹಾಸ್ವಾಮಿಗಳು, ಅರಸೀಕೆರೆಯ ಶಾಂತಲಿಂಗ ದೇಶೀಕೇಂದ್ರ ಮಹಾಸ್ವಾಮಿಗಳು ವಹಿಸುವರು.

ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ಕುರಿತು ಸಾಹಿತಿ ಬಿ.ಆರ್. ಪೊಲೀಸಪಾಟೀಲ ರಚಿಸಿದ 'ಉರಿಯ ಗದ್ದುಗೆ' ಕಾದಂಬರಿ ಹಾಗೂ ಭೋಜರಾಜ ಸೊಪ್ಪಿಮಠ ಸಂಪಾದಿಸಿದ 'ಕರುಣಾಮಯಿ ಭಾಗ-2' ಕೃತಿಗಳು ಬಿಡುಗಡೆಗೊಳ್ಳುವವು. ಬಸವ ಪುರಸ್ಕಾರ ಪ್ರಶಸ್ತಿಗೆ ಭಾಜನರಾದ ಡಾ. ವೀರಣ್ಣ ರಾಜೂರ ಹಾಗೂ ಡಾ. ಎನ್.ಜಿ. ಮಹಾದೇವಪ್ಪ ಅವರನ್ನು ಸಂಮಾನಿಸಲಾಗುವುದು.

ಅತಿಥಿಗಳಾಗಿ ನ್ಯೂಜಿಲೆಂಡ್‌ನ ಬಸವ ಸಮಿತಿಯ ಸಂಸ್ಥಾಪಕ ಲಿಂಗಣ್ಣ ಕಲಬುರ್ಗಿ, ಪತ್ರಕರ್ತ ಸನತ್‌ಕುಮಾರ ಬೆಳಗಲಿ, ಸಾಹಿತಿಗಳಾದ ಅಕ್ಬರ ಕಾಲಿಮಿರ್ಚಿ ಆಗಮಿಸುವರು. ಜ. ತೋಂಟದಾರ್ಯ ವಿದ್ಯಾಪೀಠದ ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಹಾಗೂ ಸಂಜೆ 6.30ಕ್ಕೆ ಸಾಣೇಹಳ್ಳಿ ಶಿವ ಸಂಚಾರ ನಾಟಕ ಕಲಾತಂಡದ 'ಕಲ್ಯಾಣದ ಬಾಗಿಲು' ನಾಟಕ ಪ್ರದರ್ಶನ ಜರುಗುವುದು.ತೋಂಟದಾರ್ಯ ಮಠದ ಸದ್ಭಕ್ತರು, ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ಶಿಷ್ಯರು, ಬಸವಾಭಿಮಾನಿಗಳು ಕಾರ್ಯಕ್ರಮಕ್ಕೆ ಆಗಮಿಸಲು ಶ್ರೀಮಠದ ಪ್ರಕಟಣೆ ತಿಳಿಸಿದೆ.

ಲಿಂ.ತೋಂಟದ ಶ್ರೀಗಳ 75ನೇ ಜಯಂತಿಯನ್ನು 'ಭಾವೈಕ್ಯತಾ ದಿನ'ವಾಗಿ ಆಚರಿಸದಂತೆ ಮನವಿ


# ಶ್ರೀಮಠದ ಭಕ್ತರ ಪಾಲಿಗೆ ಕರಾಳ ದಿನ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಗದಗ-ಡಂಬಳ ತೋಂಟದಾರ್ಯ ಮಠದ ಲಿಂ.ಡಾ. ತೋಂಟದ ಸಿದ್ದಲಿಂಗ ಶ್ರೀಗಳ 75ನೇ ಜಯಂತಿಯ ದಿನವನ್ನು 'ಭಾವೈಕ್ಯತಾ ದಿನ' ಎಂದು ಆಚರಿಸದಂತೆ ಶಿರಹಟ್ಟಿಯ ಶ್ರೀ ಜ.ಫಕೀರೇಶ್ವರ ಭಾವೈಕ್ಯತಾ ಪೀಠದ ಸದ್ಭಕ್ತರು ಸೋಮವಾರ ತಹಸೀಲ್ದಾರರ ಮೂಲಕ ಮುಖ್ಯಮಂತ್ರಿ, ಗೃಹಮಂತ್ರಿ, ಜಿಲ್ಲಾಧಿಕಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶ್ರೀಮಠದ ಭಕ್ತರು, 500 ವರ್ಷಗಳ ಭಾವೈಕ್ಯತಾ ಪರಂಪರೆಯ ಇತಿಹಾಸವನ್ನು ಹೊಂದಿದ ಶ್ರೀ ಜ.ಫಕೀರೇಶ್ವರ ಭಾವೈಕ್ಯತಾ ಮಹಾಸಂಸ್ಥಾನ ಪೀಠದ ಕರ್ತೃ ಶ್ರೀ ಜ.ಫಕೀರೇಶ್ವರರಿಗೆ ಮಾತ್ರ ಅನ್ವಯಿಸುವ ಭಾವೈಕ್ಯತೆಯ ಹರಿಕಾರ ಎಂಬ ವಿಶೇಷಣ ಪದವನ್ನು ಲಿಂ.ಡಾ. ತೋಂಟದ ಸಿದ್ದಲಿಂಗ ಸ್ವಾಮೀಜಿಗಳಿಗೆ ಅನ್ವಯಿಸಿ ಅವರ 75ನೇ ಜಯಂತಿ ದಿನವಾದ ಫೆ.21ರಂದು 'ಭಾವೈಕ್ಯತೆಯ ದಿನ' ಎಂಚ ಆಚರಣೆ ಮಾಡುತ್ತಿರುವ ಗದುಗಿನ ಶ್ರೀ ತೋಂಟದಾರ್ಯ ಮಠದ ಕಾರ್ಯಕ್ರಮವನ್ನು ಶಿರಹಟ್ಟಿಯ ಶ್ರೀ ಜ.ಫ.ಸಂಸ್ಥಾನ ಮಠದ ಸದ್ಭಕ್ತರು ಬಲವಾಗಿ ಖಂಡಿಸುತ್ತೇವೆ. ಅದು ನಮ್ಮ ಸ್ವಾಭಿಮಾನವೂ ಹೌದು.

ಶ್ರೀ ಮಠದ ಹಿರಿಯ ಶ್ರೀಗಳ ಅಪ್ಪಣೆಯ ಮೇರೆಗೆ ಉತ್ತರಾಧಿಕಾರಿ ಜ.ಫ.ದಿಂಗಾಲೇಶ್ವರ ಶ್ರೀಗಳು ಈ ವಿಷಯವನ್ನು ಗದುಗಿನ ಶ್ರೀ ತೋಂಟದಾರ್ಯ ಮಠದ ಆಡಳಿತಾಧಿಕಾರಿಗಳಿಗೆ ದೂರವಾಣಿ ಮೂಲಕ ಗಮನಕ್ಕೆ ತಂದಿದ್ದರೂ



ಕೂಡಾ ಸೂಕ್ತ ಸ್ಪಂದನೆ ಸಿಕ್ಕಿಲ್ಲ. ಭಾವೈಕ್ಯತಾ ಪದ ಬಳಕೆ ಬಿಟ್ಟು ಉಳಿದಂತೆ 75ನೇ ಜಯಂತ್ಯುತ್ಸವ ಗದಗನ ತೋಂಟದಾರ್ಯ ಮಠದವರು ವಿಜೃಂಭಣೆಯಿಂದ ಆಚರಿಸಲು ನಮ್ಮ ಯಾವುದೇ ತಕರಾರು ಇಲ್ಲ. ಇದಕ್ಕೆ ತೋಂಟದಾರ್ಯ ಮಠದವರು ಒಪ್ಪಿ ಪತ್ರಿಕಾ ಹೇಳಿಕೆ ನೀಡಿ ಶಿರಹಟ್ಟಿ ಜಗದ್ಗುರುಗಳಿಗೆ ಮೀಸಲಾಗಿರುವ ಭಾವೈಕ್ಯತೆಯ ಹರಿಕಾರ ಎಂಬ ಪದವನ್ನು ತಾವು ಉಪಯೋಗಿಸಿಕೊಂಡು ಆ ದಿನವನ್ನು ಭಾವೈಕ್ಯತಾ ದಿನ ಎಂದು ಆಚರಿಸಲು ಮುಂದಾದರೆ ನಾವೂ ಅದನ್ನು ಕರ್ತೃಗಳ ಸಾಕ್ಷಿಯಾಗಿ ಉಗ್ರವಾಗಿ ಪ್ರತಿಭಟಿಸುತ್ತೇವೆ ಎಂದರು.

ಭಾವೈಕ್ಯತಾ ದಿನ ಪದ ಬಳಸಿ ಆಚರಿಸುವ ಕಾರ್ಯಕ್ರಮದ ಆಚರಣೆ ಶಿರಹಟ್ಟಿ ಶ್ರೀಮಠದ ಹಾಗೂ ಶ್ರೀಮಠದ ಭಕ್ತರ ಪಾಲಿಗೆ ಕರಾಳ ದಿನವಾಗಲಿದೆ. ಫೆ.21ರ ಬುಧವಾರ ಮುಂಜಾನೆ 7 ಗಂಟೆಗೆ ಗದುಗಿನಲ್ಲಿ ಬನ್ನಿಕಟ್ಟಿ ಸಮೀಪದಲ್ಲಿರುವ ಶ್ರೀ ಜ.ಫ.ಭಾವೈಕ್ಯತಾ ಸಂಸ್ಥಾನ ಪೀಠದ ಶಾಖಾ ಮಠದಲ್ಲಿ ಗದ್ದುಗೆ ಪೂಜೆ ನೆರವೇರಿಸಿ, ಕರಾಳ ದಿನಾಚರಣೆ ಅಂಗವಾಗಿ ಬನ್ನಿಕಟ್ಟಿಯಿಂದ ಪಂಚರ ಹೊಂಡ, ಟಾಂಗಾಕೂಟ ಮಾರ್ಗವಾಗಿ ಗಾಂಧಿ ವೃತ್ತದವರೆಗೆ ಮೋಟಾರ್ ಬೈಕ್ ರ್‍ಯಾಲಿ ಹಾಗೂ ಪಥಸಂಚಲನ ನಡೆಸಿ ತೋಂಟದಾರ್ಯ ರಥ ಬೀದಿಯಲ್ಲಿ ಸಾರ್ವಜನಿಕ ಸಭೆ ಆಯೋಜಿಸಿ ಶ್ರೀ ಜ.ಫ.ಮುಕುಟಪ್ರಾಯ ಭಾವೈಕ್ಯತೆ ಎಂಬ ಪದವನ್ನು ನಮ್ಮಿಂದ ಕಸಿದುಕೊಳ್ಳಲು ಯತ್ತಿಸುವುದರಿಂದ ನಮಗಾಗಿರುವ ನೋವನ್ನು ಸಾರ್ವಜನಿಕರ ಮತ್ತು ಸರ್ಕಾರದ ಗಮನಕ್ಕೆ ತರಲಾಗುವುದು ಎಂದು ಮನವಿಯಲ್ಲಿ ಭಕ್ತರು ತಿಳಿಸಿದರು.

ಈ ಸಂದರ್ಭದಲ್ಲಿ ಚಂದ್ರಕಾಂತ ನೂರಶೆಟ್ಟರ, ಎನ್.ಆರ್. ಕುಲಕರ್ಣಿ, ಎಂ.ಕೆ. ಲಮಾಣಿ, ಸಂದೀಪ ಕಪ್ಪತ್ತನವರ, ಫಕ್ಕೀರೇಶ ರಟ್ಟಿಹಳ್ಳಿ, ನಾಗರಾಜ ಲಕ್ಕುಂಡಿ, ಎಂ.ಸಿ. ಹಿರೇಮಠ, ಶಿವನಗೌಡ ಪಾಟೀಲ, ಪರಮೇಶ ಪರಬ, ಅಶೋಕ ವರವಿ, ಸಂದೇಶ ಗಾಣಿಗೇರ, ಹೊನ್ನಪ್ಪ ಶಿರಹಟ್ಟಿ, ಮಹಾಂತೇಶ ದಶಮನಿ, ವೀರಣ್ಣ ಅಂಗಡಿ, ಮುತ್ತು ಬಡಿಗೇರ, ಬಸವಣ್ಣೆಪ್ಪ ತುಳಿ, ಬಸವರಾಜ ಚಿಕ್ಕತೋಟದ, ಪುಲಿಕೇಶಿ ಸ್ವಾಮಿ, ಮಂಜುನಾಥ ಹುಬ್ಬಳ್ಳಿ, ಅಕ್ಬರಸಾಬ ಯಾದಗಿರಿ, ಕೃಷ್ಣಾ ಕಲಬುರ್ಗಿ, ಶ್ರೀನಿವಾಸ ಬಾರಬಾರ, ಜಗದೀಶ ಇಟ್ಟೇಕಾರ, ರಿಯಾಜ ತಹಸೀಲ್ದಾರ ಮುಂತಾದವರು ಉಪಸ್ಥಿತರಿದ್ದರು.

ಲಿಂ.ತೋಂಟದ ಶ್ರೀಗಳು ತಮ್ಮ ಜೀವಿತಾವಧಿಯಲ್ಲಿ ಅನೇಕ ಧಾರ್ಮಿಕ ಸಮಾರಂಭಗಳಲ್ಲಿ ಶಿರಹಟ್ಟಿ ಮಠದ ಪೂಜ್ಯ ಕರ್ತೃಗಳನ್ನು ಭಾವೈಕ್ಯತೆಯ ಹರಿಕಾರರೆಂದು ಸಂಭೋಧಿಸಿರುವುದು ಅವರ ಪ್ರವಚನ ಪ್ರಿಯರಾದ ನಮ್ಮ ಕಿವಿಗಳಲ್ಲಿ ಇಂದಿಗೂ ಮಾರ್ದನಿಸುತ್ತಿವೆ. ವಸ್ತುಸ್ಥಿತಿ ಹೀಗಿರುವಾಗ, ಸದ್ಯ ಗದುಗಿನ ತೋಂಟದಾರ್ಯ ಮಠದ ಪೂಜ್ಯರು ಹಾಗೂ ಆಡಳಿತಗಾರರು ಭಾವೈಕ್ಯತೆಯ ಹರಿಕಾರರೆಂಬ ಪದವನ್ನು ಪೂಜ್ಯ ಲಿಂ.ತೋಂಟದ ಸಿದ್ದಲಿಂಗ ಶ್ರೀಗಳಿಗೆ ಅನ್ವಯಿಸಿ ಆಮಂತ್ರಣ ಪತ್ರಿಕೆಯಲ್ಲಿ ಪ್ರಕಟಿಸಿರುವುದು ಲಿಂ.ಶ್ರೀಗಳ ಭಾವನೆಗಳಿಗೆ ಅಪಚಾರ ಮಾಡಿದಂತೆ ಭಾಸವಾಗುತ್ತದೆ ಎಂದು ಭಕ್ತರು ಹೇಳಿದರು.



■ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ಬೆಟಗೇರಿಯ ರಂಗಾವದೂತರ ಜೋಡು ರಥೋತ್ಸವಕ್ಕೆ ಸೋಮವಾರ ಸಂಜೆ ಗದಗ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಅವರು ಚಾಲನೆ ನೀಡಿದರು. ನಂದಿವೇರಿ ಮಠದ ಪೂಜ್ಯ ಶಿವಕುಮಾರ ಮಹಾಸ್ವಾಮಿಗಳು ಕಾರ್ಯಕ್ರಮದ ಸಾನ್ನಿಧ್ಯ ವಹಿಸಿದ್ದರು.

# ಸವಿತಾ ಮಹರ್ಷಿ ಜಯಂತಿ ಆಚರಣೆ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಹಯೋಗದಲ್ಲಿ ಶುಕ್ರವಾರದಂದು ಶ್ರೀ ಸವಿತಾ ಮಹರ್ಷಿ ಜಯಂತಿಯನ್ನು ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಆಚರಿಸಲಾಯಿತು.

ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಅವರು ಶ್ರೀ ಸವಿತಾ ಮಹರ್ಷಿಗಳ ಭಾವಚಿತ್ರಕ್ಕೆ ಪುಷ್ಪ ಸಮರ್ಪಿಸಿ ಗೌರವ ಸಲ್ಲಿಸಿದರು. ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಬಿ, ಸೇರಿದಂತೆ ಸಮುದಾಯದ ಮುಖಂಡರು, ಹಿರಿಯರು ಹಾಜರಿದ್ದರು.

# ಶಿರಹಟ್ಟಿ ಕ್ಷೇತ್ರ ಶಿಕ್ಷಣಾಧಿಕಾರಿ ಅಮಾನತು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶಿಕ್ಷಣ ಇಲಾಖೆಯ ಅನುದಾನ ದುರುಪಯೋಗದ ಹಿನ್ನೆಲೆಯಲ್ಲಿ ಶಿರಹಟ್ಟಿ ಕ್ಷೇತ್ರ ಶಿಕ್ಷಣಾಧಿಕಾರಿ ಜಿ.ಎಂ.ಮುಂದಿನಮನಿ ಅವರನ್ನು ಅಮಾನತ್ತು ಮಾಡಿ ಸರಕಾರ ಆದೇಶ ಹೊರಡಿಸಿದೆ. 2022-23ನೇ ಸಾಲಿನಲ್ಲಿ ತಾಲೂಕು ಪಂಚಾಯಿತಿಯಿಂದ ಶಿಕ್ಷಕರ ವೆಚ್ಚಕ್ಕಾಗಿ ಮೀಸಲಿರಿಸಲಾಗಿದ್ದ ಅನುದಾನವನ್ನು ನಿಯಮಾವಳಿಯಂತೆ ಎಸ್‌ಡಿಎಂಸಿ ಖಾತೆಗೆ ಜಮೆ ಮಾಡದೆ ಬಿಇಓ ಅವರು ಸ್ವತಃ 8 ಲಕ್ಷ ರೂಗಳನ್ನು ಖರ್ಚು ಮಾಡಿ ನಿಯಮ ಮೀರಿದ್ದಾರೆ.



ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ ನಿಯಮ 1957ರ ಪ್ರಕಾರ ಸೂಕ್ತ ಕ್ರಮ ಜರುಗಿಸುವಂತೆ ಅಪರ ಆಯುಕ್ತರು ಶಿಕ್ಷಣ ಇಲಾಖೆ ಧಾರವಾಡ ಇವರು ಸರಕಾರಕ್ಕೆ ಪತ್ರ ಬರೆದಿದ್ದರು. ಈ ಹಿನ್ನೆಲೆಯಲ್ಲಿ ಇಲಾಖೆ ವಿಚಾರಣೆ ಬಾಕಿ ಇರಿಸಿ, ತಕ್ಷಣದಿಂದಲೇ ಜಾರಿಗೆ ಬರುವಂತೆ ಫೆ.17ರಂದು ಅಮಾನತುಗೊಳಿಸಿ ಆದೇಶಿಸಿದೆ.

ಆರೋಪಿತ ಅಧಿಕಾರಿಯ ಲೀನ್ ಅನ್ನು ಹಿರಿಯ ಉಪನ್ಯಾಸಕರು, ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ಹಾವೇರಿ ಇಲ್ಲಿನ ಖಾಲಿ ಹುದ್ದೆಗೆ ವರ್ಗಾಯಿಸಿ ಆದೇಶಿಸಲಾಗಿದೆ.

ಚಿಕೇನಕೊಪ್ಪದ ಚನ್ನವೀರ ಶರಣರ 29ನೇ ಪುಣ್ಯಸ್ಮರಣೋತ್ಸವ, ಪ್ರವಚನ ಮಂಗಲೋತ್ಸವ

# ಧರ್ಮದ ಮರ್ಮವನ್ನು ಅರಿಯಬೇಕು

■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಸುಕ್ಷೇತ್ರ ಬಳಗಾನೂರಿನ ಚಿಕೇನಕೊಪ್ಪದ ಚನ್ನವೀರ ಶರಣರ ಮಠದಲ್ಲಿ ಚನ್ನವೀರ ಶರಣರ 29ನೇ ಪುಣ್ಯಸ್ಮರಣೋತ್ಸವ, ಜಾತ್ರಾ ಮಹೋತ್ಸವದ ಅಂಗವಾಗಿ ಮಹಾತ್ಮರ ಜೀವನ ದರ್ಶನ, ಪ್ರವಚನ ಮಂಗಲೋತ್ಸವ ಜರುಗಿತು.

ಸನ್ನಿಧಾನ ವಹಿಸಿದ ಮುಂಡರಗಿಯ ಜಗದ್ಗುರು ಅನ್ನದಾನೇಶ್ವರ ಮಹಾಸ್ವಾಮಿಗಳು ಆಶೀರ್ವಚನ ನೀಡಿ, ಶರಣರು ಜ್ಞಾನ ಮತ್ತು ವೈರಾಗ್ಯದ ಮೂಲಕ ಬಂದಂತವರು. ನಗು ನಗುತ್ತಾ ಸಂಕಷ್ಟಗಳನ್ನು ಎದುರಿಸಿ ಬೆಳೆದವರು. ತಮ್ಮ ಜೀವನವನ್ನು ತ್ಯಾಗ ಮತ್ತು ಸೇವೆಯ ಮೂಲಕ ಸವೆಸಿದವರು. ಶ್ರೀ ಶಿವಶಾಂತವೀರ ಶರಣರು, ಶಿಕ್ಷಣ, ದಾಸೋಹ, ಸಮಾಜಮುಖಿಯಾಗಿ ಕಾರ್ಯ ಮಾಡುವುದರ ಮೂಲಕ ಚನ್ನವೀರ ಶರಣರು ಸಂಕಲ್ಪಗಳನ್ನು ಈಡೇರಿಸುತ್ತಿರುವುದು ಉತ್ತಮ ಬೆಳವಣಿಗೆಯಾಗಿದೆ. ಮನುಷ್ಯ ಅಧರ್ಮ, ಅನ್ಯಾಯ, ಅತ್ಯಾಚಾರ ದೂರಿಕರಿಸಿ ಧರ್ಮದ ಮರ್ಮವನ್ನು ಅರಿತುಕೊಳ್ಳಬೇಕು. ಧರ್ಮದಿಂದ ಅಭ್ಯುದಯದ ಬೆಳವಣಿಗೆಯಾಗಿ ಮುಕ್ತಿ ಹೊಂದಬೇಕು, ಪರೋಪಕಾರ ಪುಣ್ಯಮಾಡಬೇಕು. ಪರಪೀಡನೆ ಎಂದೂ ಮಾಡಬಾರದೆಂದು ಆಶೀರ್ವಚನ ನೀಡಿದರು.

ಹೂವಿನಹಡಗಲಿ ಗವಿಮಠದ ಡಾ. ಹಿರಿಶಾಂತವೀರ ಮಹಾಸ್ವಾಮಿಗಳು ಆಶೀರ್ವಚನ ನೀಡಿ, ಶರಣರು ಭಕ್ತಿ ಮತ್ತು ದಾಸೋಹ ಪರಂಪರೆಯನ್ನು ಬೆಳೆಸಿ ಕಲೆ, ಸಂಸ್ಕೃತಿಯನ್ನು



ಸಮ್ಮುಖ ವಹಿಸಿದ ಅಣ್ಣಿಗೇರಿ ದಾಸೋಹ ಮಠದ ಶ್ರೋ.ಬ್ರ. ಶಿವಕುಮಾರ ಮಹಾಸ್ವಾಮಿಗಳು ಮಾತನಾಡಿ, ಮನುಷ್ಯ ಬಳಸಿದಂತೆ ಜ್ಞಾನಸಂಪತ್ತು ಹೆಚ್ಚಾಗುವುದು. ಆದರೆ ಗಳಿಸಿದ ಸಂಪತ್ತು ಬಳಸಿದಂತೆ ಕಳೆದುಹೋಗುತ್ತದೆ. ಜ್ಞಾನಸಂಪತ್ತು ಸದಾವಕಾಲ ಉಳಿಯುವುದು. ಶ್ರೀಗುರು ಕೃಪೆಗೆ ಪಾತ್ರನಾಗಿ ತನ್ನ ಜ್ಞಾನವನ್ನು ಹೆಚ್ಚಿಸಿಕೊಂಡು ಉತ್ತಮ ಬದುಕು ಪಡೆಯಬೇಕೆಂದರು.

ಬೆಳೆಸಿಕೊಂಡು ಬರುವಲ್ಲಿ ಹೆಚ್ಚು ಪ್ರಯತ್ನಿಸಿದವರು ಎಂದು ಶರಣರ ಒಡನಾಟವನ್ನು ಸ್ಮರಿಸಿದರು. ಗುಡದೂರಿನ ಶ್ರೀ ನೀಲಕಂಠ ತಾತನವರು ಮೈನಳ್ಳಿ, ಬಿಕನಳ್ಳಿಯ ಶ್ರೀ ಸಿದ್ದೇಶ್ವರ ಸ್ವಾಮಿಗಳು ಸಮ್ಮುಖ ವಹಿಸಿದ್ದರು.

ಚುರ್ಚಿಹಾಳದ ವೇ.ಮೂ. ಪುಟ್ಟರಾಜ ಶಾಸ್ತ್ರೀಗಳು ಪ್ರವಚನದ ಮಂಗಲದ ನುಡಿಗಳನ್ನಾಡಿದರು. ಕಲಬುರ್ಗಿಯ ಸಂಗಮೇಶ ಎಸ್.ನೀಲಾ, ಕುಷ್ಟಗಿಯ ಪ್ರತಾಪಕುಮಾರ ಹಿರೇಮಠ ಅವರಿಂದ ಸಂಗೀತ ಸೇವೆ ಜರುಗಿತು. ಇದೇ ಸಂದರ್ಭದಲ್ಲಿ ಶ್ರೀಮಠದ ಸದ್ಭಕ್ತರಿಂದ ಶ್ರೀ ಶಿವಶಾಂತವೀರ ಶರಣರ ತುಲಾಭಾರ ಭಕ್ತಿಸೇವೆ ಜರುಗಿ-ತು. ಪ್ರಾ. ಆಯ್.ಎಸ್. ಹೂಗಾರ ಸ್ವಾಗತಿಸಿದರು. ಶಿವಲಿಂಗಶಾಸ್ತ್ರೀಗಳು ಸಿದ್ದಾಪೂರ ನಿರೂಪಿಸಿದರು. ಮುಖ್ಯೋಪಾಧ್ಯಾಯ ಎಸ್. ಎಸ್. ಹಿರೇಮಠ ವಂದಿಸಿದರು.

ಶ್ರೀ ಬನಶಂಕರಿ ದೇವಿ ದೇವಸ್ಥಾನದ ಲೋಕಾರ್ಪಣೆ, ಪ್ರಾಣ ಪ್ರತಿಷ್ಠಾಪನೆ

# ದಾನ-ಧರ್ಮಗಳಿಗೆ ದೇವರು ಮೆಚ್ಚುತ್ತಾನೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಮೀಪದ ಹೂವಿನಶಿಗ್ಲಿ ಗ್ರಾಮದ ಶ್ರೀ ಬನಶಂಕರಿ ದೇವಿ ದೇವಸ್ಥಾನದ ಲೋಕಾರ್ಪಣೆ ಹಾಗೂ ಪ್ರಾಣ ಪ್ರತಿಷ್ಠಾಪನೆ ಅಂಗವಾಗಿ ವಿವಿಧ ಕಾರ್ಯಕ್ರಮಗಳು ಯಶಸ್ವಿಯಾಗಿ ಜರುಗಿದವು.

ಗ್ರಾಮದ ಪ್ರಮುಖ ಬೀದಿಗಳಲ್ಲಿ ಬನಶಂಕರಿದೇವಿ ಮೂರ್ತಿಯನ್ನು ಚಂಡೆ-ಮದ್ದಳೆ, ಡೊಳ್ಳು ಭಜನೆ ಮತ್ತು ನೂರಾರು ಮುತ್ತೈದೆಯರು ಕುಂಭವನ್ನು ಹೊತ್ತು ದೇವಸ್ಥಾನಕ್ಕೆ ಮೆರವಣಿಗೆ ಮೂಲಕ ತಂದು ವಿಧಾನಗಳ ಮೂಲಕ ಇರಿಸಲಾಯಿತು. ಸಂಜೆ ನಡೆದ ಧರ್ಮ ಸಭೆಯನ್ನು ಶಿಗ್ಲಿಯ ದೇವಾಂಗ ಸಮಾಜದ ಹಿರಿಯ ಮುಖಂಡ ಸೀತಾರಾಮಪ್ಪ ಹುಲಗೂರು ಉದ್ಘಾಟಿಸಿದರು.



ಸಭೆಯ ಸಾನ್ನಿಧ್ಯವನ್ನು ಹೂವಿನಶಿಗ್ಲಿ ವಿರಕ್ತಮಠದ ಚನ್ನವೀರ ಮಹಾಸ್ವಾಮಿಗಳು ವಹಿಸಿದ್ದರು.

ಭಕ್ತರನ್ನುದ್ದೇಶಿಸಿ ಆಶೀರ್ವಚನ ನೀಡಿದ ಶ್ರೀಗಳು, ಭಕ್ತಿಗೆ ವಿಶೇಷ ಪ್ರಾಧಾನ್ಯತೆಯಿದ್ದು, ಭಕ್ತಿಯಿಂದ ಅನೇಕ ಕಾರ್ಯಗಳು ಒಳ್ಳೆಯದಾಗಿ ಜರುಗುತ್ತವೆ. ಬನಶಂಕರಿ ದೇವಿ ಮೂರ್ತಿ ಪ್ರತಿಷ್ಠಾಪನೆ ಅಂಗವಾಗಿ ಇಂತಹ ವಿಧಾಯಕ ಕಾರ್ಯಕ್ರಮಗಳು ನಡೆಯುತ್ತಾ ಬಂದಿರುವುದು ಸಂತಸ ತಂದಿದೆ. ಹಿರಿಯರ ಮಾರ್ಗದರ್ಶನದಲ್ಲಿ ಯುವಕರು ಶ್ರದ್ಧೆಯಿಂದ ಪಾಲ್ಗೊಂಡಿರುವದು ಉತ್ತಮ ವಿಚಾರ. ಮನುಷ್ಯ ಮಾನಸಿಕವಾಗಿ ಆರೋಗ್ಯವಾಗಿರಬೇಕಾದರೆ ದೇವಸ್ಥಾನಗಳಲ್ಲಿ, ಮಠ-ಮಂದಿರಗಳಲ್ಲಿ ಪೂಜೆ ಪುನಸ್ಕಾರಗಳಲ್ಲಿ ಪಾಲ್ಗೊಂಡು ದಾನ-ಧರ್ಮಗಳಲ್ಲಿ ಮನಸ್ಸು ತೊಡಗಿಸಿದರೆ ದೇವರು ಮೆಚ್ಚುತ್ತಾನೆ ಎಂದು ನುಡಿದರು.

ರಾಮಣ್ಣ ಬ್ಯಾಹಟ್ಟಿ ರಚಿಸಿದ ಶ್ರೀ ಬನಶಂಕರಿ ದೇವಿ ಪುರಾಣ ಪ್ರವಚನವನ್ನು ಶ್ರೀ ಗವಿಸಿದ್ದೇಶ್ವರ ಶಾಸ್ತ್ರಿಗಳು ನಡೆಸಿಕೊಟ್ಟರು. ಸಂಗೀತ ಕಲಾವಿದರಾದ ಬಸವರಾಜ ಗದಗ್ ಹಾಗೂ ಜಗದೀಶ್ ಕುಮಾರ್ ತಮ್ಮ ಅದ್ಭುತ ಸಂಗೀತ ಗಾಯನದೊಂದಿಗೆ ಜನಮನ ರಂಜಿಸಿದರು. ವೇದಿಕೆ ಮೇಲೆ ಗ್ರಾ.ಪಂ ಅಧ್ಯಕ್ಷೆ ಲಕ್ಷ್ಮವ್ವ ಗಡ್ಡಣ್ಣವರ್, ಸದಸ್ಯರಾದ ಶೇಖಪ್ಪ ಆಡಿನ್, ನಿಂಗಪ್ಪ ಸೊರಟೂರು, ಎಲ್ಲಮ್ಮ ಕುಂದಗೋಳ, ಲಕ್ಷ್ಮಣ ಶೆಗಡಿ, ಸಂತೋಷ ಬುಗಟಿ, ಗ್ರಾಮದ ಹಿರಿಯರಾದ ಯಲ್ಲಪ್ಪ ವಾಲಿಕಾರ್, ಬಿ.ಎಸ್. ಪಾಟೀಲ್, ಯಲ್ಲಪ್ಪ ಬಾರಕೇರ, ನಿಂಗಪ್ಪ ಹೊಳಲದ, ದೇವೇಂದ್ರಪ್ಪ ಬಿದರಿ ಇವರನ್ನು ದೇವಾಂಗ ಸಮಾಜದ ಹಿರಿಯರ ಪರವಾಗಿ ಶ್ರೀಗಳು ಸತ್ಕರಿಸಿದರು.

ಶ್ರೀ ಬಸವೇಶ್ವರ ಪ್ರಾಥಮಿಕ ಶಾಲೆಯ ಕಲಾ ಸಂಭ್ರಮ ಕಾರ್ಯಕ್ರಮದಲ್ಲಿ ಮುಪ್ಪಿನ ಬಸವಲಿಂಗ ಶ್ರೀಗಳು

# ಪ್ರತಿಭೆಯನ್ನು ಗುರುತಿಸುವ ಕೆಲಸವಾಗಲಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಶ್ರೀ ಬಸವೇಶ್ವರ ಪ್ರಾಥಮಿಕ ಶಾಲೆಯು ಲಿಂ. ಡಾ. ಅಭಿನವ ಅನ್ನದಾನ ಮಹಾಸ್ವಾಮಿಗಳವರ ದೂರದೃಷ್ಟಿ ಮತ್ತು ಸಂಕಲ್ಪಿತ ಶಕ್ತಿಯಿಂದ ಸ್ಥಾಪನೆಯಾಗಿದೆ. ಶಾಲೆ ಪ್ರಾರಂಭಗೊಂಡು ಮೂರು ದಶಕಗಳು ಕಳೆಯುತ್ತ ಬಂದಂತೆ ಶ್ರೀಗಳವರ ದೂರದೃಷ್ಟಿಯ ಫಲ ಈಗ ಸಮಾಜಕ್ಕೆ ದೊರಕುತ್ತಿದೆ ಎಂದು ಹಾಲಕೆರೆ ಶ್ರೀ ಅನ್ನದಾನೇಶ್ವರ ಸಂಸ್ಥಾನ ಮಠದ ಪೀಠಾಧಿಪತಿ ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳವರು ಹೇಳಿದರು.

ಪಟ್ಟಣದ ಶ್ರೀ ಬಸವೇಶ್ವರ ಪ್ರಾಥಮಿಕ ಶಾಲೆಯಲ್ಲಿ ಇತ್ತೀಚೆಗೆ ನಡೆದ ಕಲಾ ಸಂಭ್ರಮ-2024 ಸಮಾರಂಭದ ದಿವ್ಯ ಸಾನ್ನಿಧ್ಯವನ್ನು ವಹಿಸಿ ಶ್ರೀಗಳು ಆಶೀರ್ವಚನ ನೀಡಿದರು.

ಈ ಶಾಲೆಯಲ್ಲಿ ಅಭ್ಯಸಿಸಿದ ಮಕ್ಕಳು ಪ್ರತಿಭಾ ಸಂಪನ್ನರಾಗಿ, ಸಾಧಕರಾಗಿ ಸಮಾಜದ ಸೇವೆಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡಿದ್ದಾರೆ. ಕಲಿಕೆ, ಕ್ರೀಡೆ ಹೀಗೆ ಮಕ್ಕಳ ಆಸಕ್ತಿ-ಅಭಿರುಚಿಗೆ ತಕ್ಕಂತೆ ಶಿಕ್ಷಣ ನೀಡುವುದರ ಜತೆಗೆ ಅವರಲ್ಲಿನ ಪ್ರತಿಭೆಯನ್ನು ಗುರುತಿಸುವ ಕೆಲಸ ಶಿಕ್ಷಕರು ಹಾಗೂ ಪಾಲಕರಿಂದ ಆಗಬೇಕು ಎಂದು ತಿಳಿಸಿದರು.

ಸರಕಾರಿ ಪದವಿ ಕಾಲೇಜು ಸಹಾಯಕ ಪ್ರಾಧ್ಯಾಪಕ ಡಾ. ಶಿವರಾಜ ಗುರಿಕಾರ ಉಪನ್ಯಾಸ ನೀಡಿದರು. ನಂತರ ಶಾಲೆಯ ವಿದ್ಯಾರ್ಥಿಗಳಿಂದ ವಿವಿಧ ಸಾಂಸ್ಕೃತಿಕ ಚಟುವಟಿಕೆಗಳು ನಡೆದವು. ವೇದಿಕೆಯ ಮೇಲೆ ಸಂಸ್ಥೆಯ ಆಡಳಿತಾಧಿಕಾರಿ ಎನ್.ಆರ್. ಗೌಡರ, ಮಲ್ಲಿಕಾರ್ಜುನಪ್ಪ ಮೆಣಸಗಿ, ಮುಖ್ಯ ಶಿಕ್ಷಕಿ ಬಿ.ಜಿ. ಶಿರ್ಸಿ, ಪ್ರಾಚಾರ್ಯ ವೈ.ಸಿ. ಪಾಟೀಲ ಉಪಸ್ಥಿತರಿದ್ದರು.

ಸಮಾರಂಭದಲ್ಲಿ ಎಸ್.ವಿ. ಹಿರೇಮಠ, ವಿ.ಪಿ. ಗ್ರಾಮಪುರೋಹಿತ, ಎಸ್.ಕೆ. ಕುಲಕರ್ಣಿ, ಎಂ.ವಿ. ಕಡೆತೋಟದ, ವಿ.ಎಸ್. ಜಾಧವ, ಎಸ್.ಎಚ್. ಮಾನ್ವಿ, ಗೀತಾ ಶಿಂಧೆ, ಕೆ.ಐ. ಕೋಳಿವಾಡ, ಐ.ಬಿ. ಒಂಟೇಲಿ, ಎನ್.ಜೆ. ಸಂಗನಾಳ, ಜೆ.ವಿ. ಕೆರಿಯವರ, ಅಕ್ಕಮಹಾದೇವಿ, ಗೀತಾ ಕಂಬಳಿ, ರಜಿಯಾ ಬೇಗಂ, ಮಲ್ಲಮ್ಮ ಸಿಳ್ಳಿನ, ವಿದ್ಯಾ ಮುಗಳಿ, ಜಯಶ್ರೀ ಮೆಣಸಗಿ, ನಯನಾ ಜೋಳದ, ವೀಣಾ ಯಾಳಗಿ ಸೇರಿದಂತೆ ವಿದ್ಯಾರ್ಥಿಗಳೆಲ್ಲರೂ ಸೇರಿ ಸಂಭ್ರಮಿಸಿದರು.



ಸಮಾರಂಭವನ್ನು ಶಾಲೆಯ ಚೇರಮನ್, ಖ್ಯಾತ ವೈದ್ಯ ಡಾ. ಜಿ.ಕೆ. ಕಾಳೆ ಉದ್ಘಾಟಿಸಿ ಮಾತನಾಡಿ, ಪ್ರತಿಯೊಬ್ಬ ಮಗುವಿನಲ್ಲಿಯೂ ಒಂದು ವಿಶಿಷ್ಠವಾದ ಪ್ರತಿಭೆ ಇರುತ್ತದೆ. ಇದನ್ನು ಪ್ರೋತ್ಸಾಹಿಸಿದಾಗ ಮಾತ್ರ ಅವರಲ್ಲಿರುವ ಪ್ರತಿಭೆ ಇನ್ನಷ್ಟು ಹೊರ ಹೊಮ್ಮಲು ಸಾಧ್ಯ ಎಂದು ಹೇಳಿದರು.

# ರಂಭಾಪುರಿ ಶ್ರೀಗಳ ವಿರುದ್ಧ ಪಿತೂರಿಗೆ ಖಂಡನೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪರಮಪೂಜ್ಯ ಶ್ರೀಮದ್ ರಂಭಾಪುರಿ ಜಗದ್ಗುರುಗಳ ವಿರುದ್ಧ ಶನಿವಾರ ಬಾಗಲಕೋಟೆ ಜಿಲ್ಲೆ ಕಲಾದಗಿ ಗ್ರಾಮದಲ್ಲಿ ನಡೆದ ಪಿತೂರಿಯನ್ನು ತೀವ್ರವಾಗಿ ಖಂಡಿಸುವದಾಗಿ ಭಕ್ತರ ಪರವಾಗಿ ಶಿಗ್ಲಿಯ ವೀರಣ್ಣ ಪವಾಡದ ಹೇಳಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಆದಿ ಜಗದ್ಗುರು ರೇಣುಕಾಚಾರ್ಯರ ಪ್ರತಿರೂಪವಾದ ಶ್ರೀಮದ್ ರಂಭಾಪುರಿ ಜಗದ್ಗುರುಗಳ ವಿರುದ್ಧ ನಡೆದ ಈ ಘಟನೆ ಭಕ್ತರ ಮನಸ್ಸಿಗೆ ಬಹಳ ನೋವು ತಂದಿದೆ. ಈ ಕೃತ್ಯಕ್ಕೆ ನೇರವಾಗಿ ಹಾಗೂ ಪರೋಕ್ಷವಾಗಿ ಕಾರಣೀಕರ್ತರಾದವರ ಮೇಲೆ ಆದಿ ಜಗದ್ಗುರು ರೇಣುಕಾದಿ ಪಂಚಾಚಾರ್ಯರು ತಕ್ಕ ಶಿಕ್ಷೆಯನ್ನು ನೀಡಲಿ. ರಂಭಾಪುರಿ ಜಗದ್ಗುರುಗಳು ಈ ಕೃತ್ಯದಿಂದ ಧೃತಿಗೆಡದೆ, ಎಂದಿನಂತೆ ವೀರಶೈವ ಧರ್ಮ ಪ್ರಚಾರ ಕಾರ್ಯದಲ್ಲಿ ತೊಡಗಿಸಿಕೊಳ್ಳಲಿ ಎಂದು ಪ್ರಾರ್ಥಿಸುವುದಾಗಿ ಹೇಳಿರುವ ಅವರು, ಈ ಕೃತ್ಯವೆಸಗಿದವರ ವಿರುದ್ಧ ಕಾನೂನು ಕ್ರಮವಾಗಲಿ. ಕಲಾದಗಿ ಗ್ರಾಮದ ವೀರಶೈವ ಮುಖಂಡರು ಈ ನಿಟ್ಟಿನಲ್ಲಿ ಕಾರ್ಯಪ್ರವೃತ್ತರಾಗಬೇಕೆಂದು ಮನವಿ ಮಾಡುವದಾಗಿ ಅವರು ಹೇಳಿದ್ದಾರೆ.



## ವಿಜ್ರಂಭಣೆಯಿಂದ ಜರುಗಿದ ಪೂಜ್ಯ ವೀರಪ್ಪಜ್ಜ, ರಂಗಪ್ಪಜ್ಜ ಗುರು-ಶಿಷ್ಯರ ಜೋಡು ರಥೋತ್ಸವ

# ಬೆಟಗೇರಿಯಲ್ಲಿ ಜೋಡು ರಥೋತ್ಸವದ ಸಂಭ್ರಮ

■ ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ಬೆಟಗೇರಿ-ನರಸಾಪೂರ ಮಧ್ಯದಲ್ಲಿರುವ ಪೂಜ್ಯ ರಂಗಾವಧೂತರ ತಪೋಭೂಮಿಯಲ್ಲಿ ಅವರಾತ್ರಿ ಅಮವಾಸ್ಯೆಯ ದಶಮಿ ದಿನವಾದ ಫೆ.19ರಂದು ಪೂಜ್ಯ ವೀರಪ್ಪಜ್ಜ ಹಾಗೂ ಪೂಜ್ಯ ರಂಗಪ್ಪಜ್ಜ ಗುರು-ಶಿಷ್ಯರ ಜೋಡು ರಥೋತ್ಸವ ವಿಜ್ರಂಭಣೆಯಿಂದ ಜರುಗಿತು. ರಾಜ್ಯದಲ್ಲಿ ಬಹುತೇಕ ಜೋಡು ರಥೋತ್ಸವ ನಡೆಯುವುದು ಇದೊಂದೇ ಜಾತ್ರೆಯಲ್ಲಿ ಎಂಬುದು ಇನ್ನೊಂದು ವಿಶೇಷ.

ರಥೋತ್ಸವ ಪ್ರಾರಂಭವಾಗುತ್ತಿದ್ದಂತೆ ಮುಗಿಲುಮುಟ್ಟಿದ ನೆರೆದಿದ್ದ ಸಹಸ್ರಾರು ಸದ್ಭಕ್ತರ ಹರ್ಷೋದ್ಗಾರಗಳು ರಂಗಪ್ಪಜ್ಜನ ಜಾತ್ರೆಗೆ ವಿಶೇಷ ಆಕರ್ಷಣೆ ನೀಡಿದವು.

ರಂಗಪ್ಪಜ್ಜನ ಮಠದಲ್ಲಿ ಅಲಂಕೃತವಾಗಿ ನೂತನವಾಗಿ ಪೂಜ್ಯ ವೀರಪ್ಪಜ್ಜನ ರಥ ಸಿದ್ಧಪಡಿಸಲಾಗಿತ್ತು. ನರಸಾಪೂರದಲ್ಲಿ ಸಿದ್ಧಗೊಳಿಸಿದ್ದ ಪೂಜ್ಯ ರಂಗಪ್ಪಜ್ಜನ ತೇರು ಸಂಜೆ 6 ಗಂಟೆಗೆ ರಂಗಪ್ಪಜ್ಜನ ಮಠ ತಲುಪಿ ವಿಲೀನಗೊಂಡಾಗ ಅಲ್ಲಿ ನೆರೆದಿದ್ದ ಸದ್ಭಕ್ತರು ಭಕ್ತಿಯ ಪರಾಕಾಷ್ಠೆ ಮೆರೆದರು. ವಿಶಾಲವಾದ ಬಯಲಿನಲ್ಲಿ ಸದ್ಭಕ್ತರು ತಮ್ಮ ತಮ್ಮ ಕುಟುಂಬ ಹಾಗೂ ಸ್ನೇಹಿತರೊಂದಿಗೆ ಬೆಟಗೇರಿಯ ಮಿರ್ಚಿ-ಮಂಡಕ್ಕಿ, ಪುರೇ ಬಜಿ ಸೇರಿದಂತೆ ವಿವಿಧ ತಿನಿಸುಗಳನ್ನು ಸವಿದು ತಮ್ಮ ಸಂತಸ ವ್ಯಕ್ತಪಡಿಸಿದರು.



ಬೆಟಗೇರಿ ಮಂಜುನಾಥ ನಗರದ ನಾಗಲಿಂಗೇಶ್ವರ ಯುವಕ ಮಂಡಳ ಹಾಗೂ ಶಿವಾಜಿ ನಗರದ ವಿನಾಯಕ ಗೆಳೆಯರ ಬಳಗದವರು ಶ್ರದ್ಧಾ-ಭಕ್ತಿಯಿಂದ ಭಜನೆಯೊಂದಿಗೆ ರಂಗಪ್ಪಜ್ಜ ಹಾಗೂ ವೀರಪ್ಪಜ್ಜ ಗುರುಶಿಷ್ಯರ ತೇರುಗಳಿಗೆ ಪ್ರತಿ ವರ್ಷ ಬೃಹತ್ ಗಾತ್ರದ ಹೂಮಾಲೆಗಳನ್ನು ಅರ್ಪಿಸುವುದು ವಿಶೇಷವಾಗಿದೆ.

ಗದಗ-ಬೆಟಗೇರಿ ನಗರಸಭಾ ಸ್ಥಾಯಿ ಸಮಿತಿ ಅಧ್ಯಕ್ಷ ರಾಘವೇಂದ್ರ ಯಳವತ್ತಿ, ಮುಖಂಡರಾದ ಎಸ್.ಆರ್. ಬಸವಾ, ಗಣೇಶಸಿಂಗ್ ಬ್ಯಾಳಿ, ಅಮರೇಶ ಚ್ಯಾಗಿ, ನಿಂಗಪ್ಪ ಚೇಗೂರ, ಮೈಲಾರಪ್ಪ ಅರಣಿ, ರುದ್ರಪ್ಪ ಬಾದರದಿನ್ನಿ, ಭೋಜಪ್ಪ ಹೆಗ್ಗಡಿ, ಮಹದೇಹಸಾ ಮೇರವಾಡೆ, ಹೇಮಂತಗೌಡ ಬೆನಹಾಳ, ರಾಜು ಕಟಗಿ, ರಾಮಣ್ಣ ಗಡಗಿ, ಚಿದಾನಂದ ಕಾಕಿ, ಮಲ್ಲೇಶಪ್ಪ ಐಲಿ, ವಿಜಯ ಕಬಾಡಿ, ದುರ್ಗಾಸಿಂಗ್ ಕಾಟೇವಾಲ, ರಂಗಪ್ಪ ಹುಯಿಲಗೋಳ, ಅಶೋಕ ಮುಳಗುಂದ, ಗುರನಗೌಡ ಗೌಡ್ರ, ಶ್ರೀಧರ ಗೆದ್ದಣ್ಣವರ, ನೂರಕ್ಕು ಹೆಚ್ಚು ಸಾಧು-ಸಂತರು ಸೇರಿದಂತೆ ಸಾವಿರಾರು ಸದ್ಭಕ್ತರು ಪಾಲ್ಗೊಂಡಿದ್ದರು.


ಜಾತ್ರೆಯಲ್ಲಿ ಪಾಲ್ಗೊಂಡ ಭಕ್ತರಿಗೆ ಗದಗ-ಬೆಟಗೇರಿ ನಗರಸಭೆಯಿಂದ ಕುಡಿಯುವ ನೀರಿನ ವ್ಯವಸ್ಥೆಯನ್ನು ಕಲ್ಪಿಸಲಾಗಿತ್ತು. ಪೊಲೀಸ್ ಇಲಾಖೆಯಿಂದ ಸೂಕ್ತ ಬಂದೋಬಸ್ತ್, ರಂಗಾವಧೂತರ ತಪೋಭೂಮಿಯ ಸುತ್ತಮುತ್ತಲಿನ ಪ್ರದೇಶದ ಯುವಕರು ಉತ್ಸಾಹದಿಂದ ಜಾತ್ರೆಗೆ ಶ್ರಮಿಸಿ ನೀಡಿದ ಸಹಕಾರ ಅಪಾರವಾಗಿತ್ತು. ಗದಗ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಜಾತ್ರೆಗೆ ಚಾಲನೆ ನೀಡಿ ಶುಭ ಕೋರಿದರು. ಸಾನ್ನಿಧ್ಯವನ್ನು ನಂದಿವೇರಿ ಮಠದ ಪೂಜ್ಯ ಶಿವಕುಮಾರ ಮಹಾಸ್ವಾಮಿಗಳು ವಹಿಸಿದ್ದರು.

ರಂಗಾವಧೂತರ ತಪೋಭೂಮಿಯಲ್ಲಿ ನಡೆದ ಜೋಡು ರಥೋತ್ಸವಕ್ಕೆ ಸಹಕರಿಸಿದ ಸಮಸ್ತ ಸದ್ಭಕ್ತರಿಗೆ, ದಾನಿಗಳಿಗೆ, ಗದಗ-ಬೆಟಗೇರಿ ನಗರಸಭೆ, ಹಾತಲಗೇರಿ, ಗ್ರಾಮ ಪಂಚಾಯಿತಿ, ಪೊಲೀಸ್ ಇಲಾಖೆ, ಆರೋಗ್ಯ ಇಲಾಖೆ ಹಾಗೂ ಪ್ರತ್ಯಕ್ಷ-ಪರೋಕ್ಷ ಸೇವೆ ಸಲ್ಲಿಸಿದವರಿಗೆ ಹಾಗೂ ವಿಶೇಷವಾಗಿ ಒಂದು ವಾರದಿಂದ ಪ್ರಸಾದ ಸೇವೆಎಯನ್ನು ಸ್ವಯಂ ಪ್ರೇರಣೆಯಿಂದ ಸಿದ್ಧಗೊಳಿಸಿದ್ದ ಚಿದಾನಂದ ಖಾಕಿ ಮುಂತಾದವರಿಗೆ ಟ್ರಸ್ಟ್ ಕಾರ್ಯದರ್ಶಿ ಗಣೇಶಸಿಂಗ್ ಬ್ಯಾಳಿ ಅಭಿನಂದನೆ ಸಲ್ಲಿಸಿದರು.

# ವಸತಿರಹಿತ ಕುಟುಂಬಗಳಿಗೆ ಮನೆ ಹಂಚಿಕೆಗೆ ಮನವಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರದ ವಿವಿಧ ಪ್ರದೇಶಗಳಲ್ಲಿ ಬಾಡಿಗೆ ಮನೆಗಳಲ್ಲಿ ಹಾಗೂ ಸ್ಲಂ ಪ್ರದೇಶದ ಗುಡಿಸಲುಗಳಲ್ಲಿ ಯಾವುದೇ ಸರ್ಕಾರದ ವಸತಿ ಯೋಜನೆಗಳನ್ನು ಪಡೆಯದೇ ದಶಕಗಳಿಂದ ವಾಸಿಸುತ್ತಿರುವ 348 ವಸತಿರಹಿತ ಕುಟುಂಬಗಳಿಗೆ ಶೀಘ್ರವೇ ಮನೆಗಳನ್ನು ಹಂಚಿಕೆ ಮಾಡಬೇಕೆಂದು ಸ್ಲಂ ಜನಾಂದೋಲನ-ಕರ್ನಾಟಕ ಮತ್ತು ಗದಗ ಜಿಲ್ಲಾ ಸ್ಲಂ ಸಮಿತಿಯಿಂದ ರಾಜ್ಯದ ಕಾನೂನು ಮತ್ತು ಸಂಸದೀಯ ಹಾಗೂ ಪ್ರವಾಸೋದ್ಯಮ ಸಚಿವರು ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಹೆಚ್.ಕೆ. ಪಾಟೀಲರಿಗೆ ಮನವಿ ಸಲ್ಲಿಸಲಾಯಿತು.





ಗದಗ ಜಿಲ್ಲಾ ಸ್ಲಂ ಸಮಿತಿ ಇಮ್ತಿಯಾಜ ಆರ್.ಮಾನ್ವಿ ಮಾತನಾಡಿ. ಕಳೆದ 2014ರಿಂದ ನಗರದ ನೈಜ್ ವಸತಿರಹಿತ ಕುಟುಂಬಗಳಿಗೆ ಮನೆಗಳನ್ನು ಹಂಚಿಕೆ ಮಾಡಬೇಕೆಂದು ಒತ್ತಾಯಿಸಿ ನಿರಂತರ ಹೋರಾಟಗಳನ್ನು ನಡೆಸುತ್ತ ಬಂದಿದ್ದೇವೆ. ಸಚಿವರ ಸೂಚನೆಯ ಮೇರೆಗೆ ಪೌರಾಯುಕ್ತರು 348 ವಸತಿರಹಿತ ಕುಟುಂಬಗಳ ಸಮೀಕ್ಷೆ ನಡೆಸಿ ಯಾದಿಯನ್ನು ತಯಾರಿಸಿದ್ದಾರೆ. ಸಚಿವರು ಕೂಡಲೇ ವಸತಿರಹಿತ ಕುಟುಂಬಗಳಿಗೆ ಮನೆಗಳನ್ನು ಹಂಚಿಕೆ ಮಾಡಲು ಕ್ರಮ ಕೈಗೊಳ್ಳಬೇಕೆಂದು ಮನವಿ ಮಾಡಿದರು.

ಇದಕ್ಕೆ ಪ್ರತಿಕ್ರಿಯಿಸಿದ ಸಚಿವ ಹೆಚ್.ಕೆ. ಪಾಟೀಲ, ಅಧಿವೇಶನ ಮುಗಿದ ನಂತರ ವಸತಿರಹಿತ ಕುಟುಂಬಗಳಿಗೆ ಮನೆಗಳ ಹಂಚಿಕೆಗೆ ಕ್ರಮ ಕೈಗೊಳ್ಳಲಾಗುವುದೆಂದು ಹೇಳಿದರು.

ಈ ಸಂದರ್ಭದಲ್ಲಿ ಸ್ಲಂ ಸಮಿತಿಯ ಪ್ರಮುಖರಾದ ಅಶೋಕ ಎಸ್.ಕುಸಬಿ, ಪರವೀನಬಾನು ಹವಾಲ್ದಾರ, ವಂದನಾ ಶ್ಯಾವಿ, ಮಕ್ತುಮಸಾಬ ಮುಲ್ಲಾನವರ, ಮರ್ದಾನಬಿ ಬಳ್ಳಾರಿ, ಕಮಲವ್ವ ಚಲವಾದಿ, ಮೆಹರುನಿಸಾ ಢಾಲಾಯತ, ಕವಿತಾ ಶ್ಯಾವಿ, ನಜಮುನಿಸಾ ಮುರಗೋಡ, ದ್ಯಾಮಣ್ಣ ಡೋಣಿ, ಶಾಜನಬಿ ಕರ್ನಾಚಿ, ಖಾಜಾಸಾನ ಇಸ್ಮಾಯಿಲನವರ, ವಿಶಾಲಕ್ಷಿ ಹಿರೇಗೌಡ್ರ, ಮಲೇಶಪ್ಪ ಕಲಾಲ, ಇಬ್ರಾಹಿಂ ಮುಲ್ಲಾ ಮುಂತಾದವರು ಉಪಸ್ಥಿತರಿದ್ದರು.

# ಸಚಿವ ಎಚ್.ಕೆ. ಪಾಟೀಲರಿಗೆ ಗೌರವ ಸಮರ್ಪಣೆ



■ ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನಲ್ಲಿ ಬುದ್ಧ ವಿಹಾರ ನಿರ್ಮಾಣಕ್ಕಾಗಿ 2 ಕೋಟಿ ರೂಪಾಯಿಗಳನ್ನು ಬಜೆಟ್‌ನಲ್ಲಿ ಘೋಷಿಸಿದ ನಿಮಿತ್ತ ಗದಗ ಜಿಲ್ಲಾ ಉಸ್ತುವಾರಿ ಸಚಿವರು, ಕಾನೂನು ಮತ್ತು ಸಂಸದೀಯ ವ್ಯವಹಾರ ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವರಾದ ಡಾ. ಹೆಚ್. ಕೆ. ಪಾಟೀಲರನ್ನು ಅಭಿನಂದಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಕರ್ನಾಟಕ ದಲಿತ ಸಂಘರ್ಷ ಸಮಿತಿ (ಅಂಬೇಡ್ಕರ್ ವಾದ) ಗದಗ ಜಿಲ್ಲಾ ಪ್ರಧಾನ ಸಂಚಾಲಕ ಬಾಲರಾಜ್ ಅರಬರ, ದುರ್ಗಪ್ಪ ವಿಭೂತಿ, ಮುತ್ತಪ್ಪ ಭಜಂತ್ರಿ, ಕೆಂಚಪ್ಪ ಮ್ಯಾಗೇರಿ, ಹನುಮಂತ್ ಕಿರಿಟಗೇರಿ ಮುಂತಾದವರು ಉಪಸ್ಥಿತರಿದ್ದರು.

# ಟಿಪ್ಪರ್‌ಗಳ ಹಾವಳಿಗೆ ಬೇಕಿದೆ ಕಡಿವಾಣ




■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನಲ್ಲಿ ಎಂ ಸ್ಯಾಂಡ್, ಖಡಿ ಸಾಗಿಸುವ ಟಿಪ್ಪರ್‌ಗಳ ಹಾವಳಿಯಿಂದ ಜನರು ಬೆಚ್ಚಿ ಬೀಳುವಂತಹ ಸ್ಥಿತಿ ನಿರ್ಮಾಣವಾಗಿದ್ದು, ಸಂಬಂಧಪಟ್ಟವರು ಇವುಗಳ ಮೇಲೆ ನಿಯಂತ್ರಣ ಹೇರಬೇಕು ಎಂದು ಸಾರ್ವಜನಿಕರು ಒತ್ತಾಯಿಸುವಂತಾಗಿದೆ.

ತಾಲೂಕಿನಲ್ಲಿ ಇಂತಹ ಟಿಪ್ಪರ್‌ಗಳಿಂದ ಅಗಾಗ ಅಪಘಾತ, ಹಾನಿ, ಸಾವು-ನೋವು ಸಂಭವಿಸತ್ತಲೇ ಇವೆ. ಇದಕ್ಕೆ ಸಾಕ್ಷಿ ಎಂಬಂತೆ ಸೋಮವಾರ ಬೆಳಿಗ್ಗೆ 11ಕ್ಕೆ ಪಟ್ಟಣದ ಸವಣೂರ ರಸ್ತೆಯ ಪೆಟ್ರೋಲ್ ಬಂಕ್ ಬಳಿ ವೇಗವಾಗಿ ಬಂದ ಟಿಪ್ಪರ್ ಒಂದು ಕಾರ್‌ಗೆ ಡಿಕ್ಕಿ ಹೊಡೆದಿದೆ. ಕಾರ್ ಅಲ್ಲಲ್ಲಿ ನುಜ್ಜುಗುಜ್ಜಾಗಿದ್ದು, ಕಾರಿನ ಡ್ರೈವರ್ ಆಶ್ಚರ್ಯಕರ ರೀತಿಯಲ್ಲಿ ಪ್ರಾಣಾಪಾಯದಿಂದ ಬಚಾವಾಗಿದ್ದಾನೆ. ಘಟನೆಯಿಂದ ಕೆಲಹೊತ್ತು ಟ್ರಾಫಿಕ್ ಜಾಮ್ ಉಂಟಾಗಿತ್ತು. ಈ ಸಂದರ್ಭದಲ್ಲಿಯೇ 3 ಜನ ಪ್ರಯಾಣಿಸುತ್ತಿದ್ದ ಆಲ್ಟೊ ಕಾರಿಗೆ ಮತ್ತೊಂದು ಟಿಪ್ಪರ್ ಡಿಕ್ಕಿ ಹೊಡೆದು ಕಾರು ನುಜ್ಜುಗುಜ್ಜಾಗಿದೆ. ಕಾರಿನಲ್ಲಿದ್ದವರು ಸ್ವಲ್ಪದರಲ್ಲೇ ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಘಟನೆ ಸುದ್ದಿ ತಿಳಿಯುತ್ತಿದ್ದಂತೆ ಸ್ಥಳಕ್ಕೆ ಆಗಮಿಸಿದ ಪೊಲೀಸರು ಕ್ರಮಕ್ಕೆ ಮುಂದಾದರು. ಹೆಚ್ಚು ಲಾಭದ ಉದ್ದೇಶದಿಂದ ಟಿಪ್ಪರ್‌ಗಳ ಮಾಲೀಕರು ಮತ್ತು ಡ್ರೈವರ್‌ಗಳ ಅಬ್ಬರಕ್ಕೆ ಸಾರ್ವಜನಿಕರು ನಲುಗುತ್ತಿರುವುದು ವಾಸ್ತವ. ಸಾವು-ನೋವು ಸಂಭವಿಸಿ ಅನಾಹುತಕ್ಕೆ ಕಾರಣವಾಗುವ ಮೊದಲೇ ಸಂಬಂಧಪಟ್ಟವರು ಇವುಗಳ ಅಬ್ಬರಕ್ಕೆ ಬ್ರೇಕ್ ಹಾಕಬೇಕು ಎಂದು ಮುಖಂಡ ಪದ್ಮರಾಜ ಪಾಟೀಲ ಮತ್ತು ಸಾರ್ವಜನಿಕರ ಒತ್ತಾಯಿಸಿದ್ದಾರೆ.

# ಧರ್ಮಗುರುಗಳ ಬಂಧನಕ್ಕೆ ಖಂಡನೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮುಂಬೈ ಹಾಗೂ ಗುಜರಾತ್ ಎಟಿಎಸ್ ಪೊಲೀಸರು ಮುಸ್ಲಿಂ ಸಮಾಜದ ಧರ್ಮ ಗುರುಗಳಾದ ಮೌಲಾನಾ ಮುಫ್ತಿ ಸಲ್ಮಾನ್ ಅಜಹರಿ ಅವರ ಮೇಲೆ ಸುಳ್ಳು ಆರೋಪಗಳನ್ನು ಹೊರಿಸಿ ಬಂಧಿಸಿರುವ ಕ್ರಮ ಖಂಡನೀಯವಾಗಿದೆ ಎಂದು ವೀರ ಕನ್ನಡಿಗ ಟಿಪ್ಪು ಸೇನೆ ಅಧ್ಯಕ್ಷ ಜಾಕೀರಹುಸೇನ ಹವಾಲ್ದಾರ ಹೇಳಿದರು.




ಅವರು ಪಟ್ಟಣದ ದೂದ್ ನಾನಾ ದರ್ಗಾದಿಂದ ವೀರ ಕನ್ನಡಿಗ ಟಿಪ್ಪು ಸೇನೆ ನೇತೃತ್ವದಲ್ಲಿ ಪಟ್ಟಣದ ಮುಸ್ಲಿಂ ಸಮಾಜದ ಬಾಂಧವರೊಂದಿಗೆ ಪ್ರಮುಖ ಮಾರ್ಗದಲ್ಲಿ ಖಂಡನಾ ಮೆರವಣಿಗೆ ನಡೆಸಿ ಬಸ್ ನಿಲ್ದಾಣದ ಹತ್ತಿರ ಪ್ರತಿಭಟನೆ ಉದ್ದೇಶಿಸಿ ಮಾತನಾಡಿದರು.

ಅಂಜುಮನ್ ಏ-ಇಸ್ಲಾಂ ಸಮಿತಿ ಅಧ್ಯಕ್ಷ ಮುಕ್ತಾರಅಹ್ಮದ ಗದಗ, ಪುರಸಭೆ ಸದಸ್ಯ ಸಾಹೇಬಜಾನ್ ಹವಾಲ್ದಾರ ಮಾತನಾಡಿ, ಮೌಲಾನಾ ಮುಫ್ತಿ ಸಲ್ಮಾನ ಅಜಹರಿ ಅವರ ಮೇಲಿನ ಸುಳ್ಳು ಪ್ರಕರಣ ರದ್ದುಪಡಿಸಿ ಅವರನ್ನು ತಕ್ಷಣ ಬಿಡುಗಡೆಗೊಳಿಸಬೇಕು. ಅವರ ಬಂಧನ ಅಸಂವಿಧಾನಿಕ ಕ್ರಮವಾಗಿದ್ದು, ಅಲ್ಪಸಂಖ್ಯಾತ ಮುಸ್ಲಿಂ ಸಮಾಜ ಬಾಂಧವರು ಇದನ್ನು ಖಂಡಿಸುವದಾಗಿ ಹೇಳಿದರು.

ಗ್ರೇಡ್-2 ತಹಸೀಲ್ದಾರ ಮಂಜುನಾಥ ಆಮಾಸಿ ಮನವಿ ಸ್ವೀಕರಿಸಿದರು. ಈ ಸಂದರ್ಭದಲ್ಲಿ ಅಂಜುಮನ್ ಸಂಸ್ಥೆಯ ಉಪಾಧ್ಯಕ್ಷ ಕರಿಮಸಾಬ ಸೂರಣಗಿ, ಯುನೂಸ ಚೌರಿ, ಮೌಲಾಗಳಾದ ಉಸ್ಮಾನ ಆಶರಪೆಸಾದಿಕ ಜಮಖಂಡಿ, ಖಯ್ಯುಮ ಹಜರತ್, ಅಭು ಹಜರತ್, ಉಸ್ಮಾನ ಹಜರತ್, ಶಕೀಲ ಹಜರತ್, ಶಪಿಕ ಸಿದ್ದಾಪುರ, ದಾದಾಪೀರ ಡಾಲಾಯತ್, ಹಜರತ್ ಪಟೇಲ್ ಕನಕವಾಡ, ಇರ್ಷಾದ ಕಿತ್ತೂರ, ಶೋಕತ್ ಹೆಸರೂರ, ಸಾಧಿಕ್ ಟಿಪ್ಪು ಮಹಮದಅಲಿ, ಮುಸ್ತಾಕ ಸೇರಿದಂತೆ ಪಟ್ಟಣದ ನೂರಾರು ಮುಸ್ಲಿಂ ಬಾಂಧವರು ಉಪಸ್ಥಿತರಿದ್ದರು.


# ಗುರುಚರಿತ್ರೆ ಪಾರಾಯಣದಿಂದ ಮಾನಸಿಕ ತೃಪ್ತಿ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಶ್ರೀ ಗುರುಚರಿತ್ರೆ ಶ್ರೀ ನರಸಿಂಹ ಸರಸ್ವತಿಗಳ ಜೀವನಾಧಾರಿತ ಚರಿತ್ರೆಯಾಗಿದ್ದು, ಶ್ರೀ ಗುರು ದತ್ತಾತ್ರೇಯರು ಗುರುವೆಂಬ ಅಭಿದಾನಕ್ಕೆ ಪಾತ್ರರಾಗಿದ್ದಾರೆ. ಗುರು ಚರಿತ್ರೆಯನ್ನು ಪಠಿಸುವುದರಿಂದ ಮಾನಸಿಕ ತೃಪ್ತಿ, ನೆಮ್ಮದಿ ದೊರಕುತ್ತದೆ ಎಂದು ಮಾರನಬಸರಿಯ ವೇ.ಮೂ. ಶ್ರೀ ವಿಶ್ವನಾಥಭಟ್ಟ ವೈದ್ಯ ಹೇಳಿದರು.

ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ 114ನೇ ಗುರುಪ್ರತಿಪದೆ ಉತ್ಸವದ ಅಂಗವಾಗಿ ಸೋಮವಾರ ಗುರುಚರಿತ್ರೆ ಪಾರಾಯಣ ಸಪ್ತಾಹ ಪ್ರಾರಂಭದಲ್ಲಿ ಅವರು ಮಾತನಾಡಿದರು.

ತ್ರಿಮೂರ್ತಿಗಳಾದ ಬ್ರಹ್ಮ, ವಿಷ್ಣು ಮತ್ತು ಮಹೇಶ್ವರರ ಅವತಾರಿಯೆಂದು ಶ್ರೀ ಗುರು ದತ್ತಾತ್ರೇಯರು ಪರಿಗಣಿಸಲ್ಪಡುತ್ತಾರೆ. ಉತ್ಸವಗಳಿಂದ ದೇವತಾ ಸಾನ್ನಿಧ್ಯ ಒದಗುವುದರೊಂದಿಗೆ ಭಕ್ತಾದಿಗಳ ಶ್ರೇಯೋಭಿವೃದ್ಧಿ ಆಗುತ್ತದೆ. ಮಾನಸಿಕ ನೆಮ್ಮದಿಗೆ ಧ್ಯಾನ, ಪಾರಾಯಣ, ಆಧ್ಯಾತ್ಮ ಚಿಂತನ, ಭಜನೆ, ಹರಿಕೀರ್ತನೆ ಮಾಡಬೇಕು. ಗುರುಚರಿತ್ರೆ ಸಾಕಷ್ಟು ಪ್ರಾಮುಖ್ಯತೆ ಪಡೆದಿದೆ. ಗ್ರಂಥದಲ್ಲಿ ನರಸಿಂಹ ಸರಸ್ವತಿ ಸ್ವಾಮಿಯವರು ದತ್ತ ಕ್ಷೇತ್ರದ ಮಹಿಮೆ ಕುರಿತು ಜಾಗೃತವಾಗಿ ನೆಲೆಸಿರುವುದರ ಕುರಿತು ಉಲ್ಲೇಖಿಸಿದ್ದಾರೆ. ಗುರುಚರಿತ್ರೆಯ ಪಾರಾಯಣ, ಶ್ರವಣ ಹಾಗೂ ಶ್ಲೋಕಗಳನ್ನು ಶ್ರದ್ಧೆಯಿಂದ ಪಠಿಸುವುದರಿಂದ ಮನಸ್ಸಿಗೆ ಶಾಂತಿ, ನೆಮ್ಮದಿ ಪ್ರಾಪ್ತವಾಗುತ್ತದೆ. ಗುರುಚರಿತ್ರೆ ಪಾರಾಯಣವನ್ನು 1 ದಿನ, 3 ದಿನ, 7 ದಿನ ಹೀಗೆ ಅನುಕೂಲಕರ ದಿನಗಳಲ್ಲಿ ಮಾಡಬಹುದು ಎಂದು ವೈದ್ಯ ಹೇಳಿದರು.



ಈ ಸಂದರ್ಭದಲ್ಲಿ ದತ್ತಭಕ್ತ ಮಂಡಳಿ ಅಧ್ಯಕ್ಷ ಸಂಜೀವ ಕುಲಕರ್ಣಿ, ಎ.ಜಿ. ಕುಲಕರ್ಣಿ, ಅನಿಲ ಕುಲಕರ್ಣಿ, ರಘುನಾಥ ಕೊಂಡಿ, ಅರುಣ ಕುಲಕರ್ಣಿ, ಅರುಣ ಸೂರಭಟ್ಟನವರ, ಅಜಿತ ಕುಲಕರ್ಣಿ, ಶಂಕರರಾವ ಕುಲಕರ್ಣಿ, ಶ್ರೀವಲ್ಲಭಶಾಸ್ತ್ರೀ ಸದರಜೋಶಿ, ಪ್ರಶಾಂತ ಗ್ರಾಮಪುರೋಹಿತ, ಅರುಣ ಗ್ರಾಮಪುರೋಹಿತ ಮುಂತಾದವರಿದ್ದರು.

# ಅದ್ಧೂರಿಯಾಗಿ ಜರುಗಿದ ಶಿವಾಜಿ ಜಯಂತಿ

■ ವಿಜಯಸಾಕ್ಷಿ ಸುದ್ದಿ, ಗದಗ

ಛತ್ರಪತಿ ಶಿವಾಜಿ ಮಹಾರಾಜರ ಜಯಂತ್ಯುತ್ಸವವನ್ನು ಗದಗ-ಬೆಟಗೇರಿ ಅವಳಿ ನಗರದಲ್ಲಿ ಕಳೆದ 8 ವರ್ಷಗಳಿಂದ ಅತ್ಯಂತ ಅದ್ದೂರಿಯಾಗಿ ಸಂಭ್ರಮ ಸಡಗರದಿಂದ ಆಚರಿಸಿಕೊಂಡು ಬರಲಾಗುತ್ತಿದ್ದು, ಈ ವರ್ಷವೂ ಶಿವಾಜಿ ಜಯಂತಿಯನ್ನು ಅಷ್ಟೇ ವಿಜೃಂಭಣೆಯಿಂದ ಸಾವಿರಾರು ಸಂಖ್ಯೆಯ ಭಕ್ತರ ಸಮ್ಮುಖದಲ್ಲಿ ಅದ್ದೂರಿಯಾಗಿ ಆಚರಿಸಲಾಯಿತು.

2024ರ ಛತ್ರಪತಿ ಶಿವಾಜಿ ಮಹಾರಾಜರ ಜಯಂತ್ಯುತ್ಸವ ಸಮಿತಿ ಅಧ್ಯಕ್ಷ ಜಗದೀಶ್ ಎಸ್.ಪಿ. ಅಧ್ಯಕ್ಷತೆಯಲ್ಲಿ ನಗರದ ರಾಚೋಟೇಶ್ವರ ದೇವಸ್ಥಾನದಿಂದ ಆರಂಭವಾದ ಮೆರವಣಿಗೆ ಜುಮ್ಮಾ ಮಸೀದಿ, ಪಂಚ ರೌಂಡ, ಬಸವೇಶ್ವರ ಸರ್ಕಲ್, ಹುಯಿಲಗೋಳ ನಾರಾಯಣರಾವ್ ವೃತ್ತ, ಮಹೇಂದ್ರಕರ್ ಸರ್ಕಲ್, ತೋಂಟದಾರ್ಯ ಆಟೋ ನಿಲ್ದಾಣ, ಗಾಂಧಿ ಸರ್ಕಲ್ ಮಾರ್ಗವಾಗಿ ನಗರಸಭೆಯ ಮುನ್ಸಿಪಲ್ ಕಾಲೇಜು ಮೈದಾನದಲ್ಲಿ ಸಂಪನ್ನಗೊಂಡಿತು.



ಮೆರವಣಿಗೆಯುದ್ದಕ್ಕೂ ಯುವಕರು ಡಿಜೆ ಹಾಡಿಗೆ ಭರ್ಜರಿ ಡ್ಯಾನ್ಸ್ ಮಾಡಿದರು. ಮೆರವಣಿಗೆ ಕಾರ್ಯಕ್ರಮದಲ್ಲಿ ಸುಮಾರು 25 ಸಾವಿರಕ್ಕೂ ಹೆಚ್ಚು ಹಿಂದೂ ಕಾರ್ಯಕರ್ತರು ಹಾಗೂ ಶ್ರೀರಾಮ ಭಕ್ತರು ಭಾಗವಹಿಸಿದ್ದರು. ಇದೇ ವೇಳೆ 21 ಅಡಿ ಎತ್ತರದ ಶ್ರೀ ರಾಮನ ಮೂರ್ತಿ, ಶಿವಾಜಿ ಮೂರ್ತಿ, ವಾಲ್ಮೀಕಿ ಮಹರ್ಷಿಗಳ ಮೂರ್ತಿ ಸೇರಿದಂತೆ ಹಲವು ಮಹಾ ಪುರುಷರ ಮೂರ್ತಿಗಳ ಮೆರವಣಿಗೆ ನಡೆಯಿತು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka